ಸಂಪುಟ : 9 ಸಂಚಿಕೆ 219 ಪುಟ : 4 ಬೆಲೆ: 3.00 ಸೋಮವಾರ ಅಕ್ಟೋಬರ್ 7 2024 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ನಿಭಿನ್ನ...

VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 9 Issue : 219 Pages : 4 Price : 3.00 Monday October 7 2024 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

## ಶರನ್ನವರಾತ್ರಿ ದಸರಾ ಧರ್ಮ ಸಮ್ಮೇಳನದ 4ನೇ ದಿನದ ಸಮಾರಂಭದಲ್ಲಿ ಶ್ರೀ ರಂಭಾಪುರಿ ಜಗದ್ಗುರುಗಳು

# ಯುವ ಜನಾಂಗಕ್ಕೆ ಇತಿಹಾಸದ ಅರಿವು ಅವಶ್ಯಕ

■ವಿಜಯಸಾಕ್ಷಿ ಸುದ್ದಿ, ಅಬ್ಬಿಗೇರಿ
(ಮಾನವ ಧರ್ಮ ಮಂಟಪ)

ರಾಷ್ಟ್ರದ ಉಜ್ವಲ ಭವಿಷ್ಯ ನಿರ್ಮಾಣ ಮಾಡುವ ಶಕ್ತಿ ಯುವ ಜನಾಂಗದಲ್ಲಿದೆ. ಆಲಸ್ಯ ಮತ್ತು ದುರ್ವ್ಯಸನಗಳಿಂದ ದೂರವಾಗಿ ಸದೃಢ ಸಮಾಜವನ್ನು ಕಟ್ಟಿ ಬೆಳೆಸುವುದರಲ್ಲಿ ಯುವ ಜನಾಂಗ ಗಟ್ಟಿಯಾದ ಹೆಜ್ಜೆಯನ್ನಿಡಬೇಕಾಗಿದೆ. ಯುವ ಶಕ್ತಿ ಈ ದೇಶದ ಬಲು ದೊಡ್ಡ ಶಕ್ತಿ ಮತ್ತು ಆಸ್ತಿ ಎಂಬುದನ್ನು ಯಾರೂ ಮರೆಯಬಾರದೆಂದು ಬಾಳೆಹೊನ್ನೂರು ಶ್ರೀ ರಂಭಾಪುರಿ ಡಾ. ವೀರಸೋಮೇಶ್ವರ ಜಗದ್ಗುರುಗಳು ಅಭಿಪ್ರಾಯಪಟ್ಟರು.

ಅವರು ರವಿವಾರ ಶರನ್ನವರಾತ್ರಿ ದಸರಾ ಧರ್ಮ ಸಮ್ಮೇಳನದ 4ನೇ ದಿನದ ಸಮಾರಂಭದ ಸಾನ್ನಿಧ್ಯ ವಹಿಸಿ ಆಶೀರ್ವಚನ ನೀಡುತ್ತಿದ್ದರು.




ನೀತಿ ನಿಯಮವಿಲ್ಲದೇ ಸಮಾಜ, ನಾಡು ಬೆಳೆಯಲಾರದು. ಯುವ ಜನಾಂಗಕ್ಕೆ ಇತಿಹಾಸದ ಅರಿವು, ಆದರ್ಶಗಳ ಪರಿಜ್ಞಾನ ಅವಶ್ಯಕ. ವರ್ತಮಾನ-ಭವಿಷ್ಯತ್ತುಗಳಿಗೆ ಇತಿಹಾಸ ನಾಂದಿ. ಬೆಳೆಯುವ ಯುವ ಜನಾಂಗದಲ್ಲಿ ವೈಚಾರಿಕತೆ ಇರಲಿ. ಆದರೆ ನಾಸ್ತಿಕ ಮನೋಭಾವ ಬೆಳೆಯಬಾರದು. ವಿಜ್ಞಾನ-ತಂತ್ರಜ್ಞಾನ ಬೆಳೆದಂತೆ ಮನುಷ್ಯನ ಸದ್ಭಾವನೆಗಳು ಬೆಳೆಯದಿರುವುದೇ ಇಂದಿನ ಹಲವಾರು ಅವಾಂತರಗಳಿಗೆ ಕಾರಣ. ಮನುಷ್ಯನ ಬುದ್ಧಿಶಕ್ತಿ ಬೆಳೆದಷ್ಟು ಭಾವನೆಗಳು ಬೆಳೆಯುತ್ತಿಲ್ಲ. ಧರ್ಮದಿಂದ ಭಾವಶಕ್ತಿ ಬೆಳೆಯಬೇಕು. ಶಿಕ್ಷಣದಿಂದ ಬುದ್ಧಿಶಕ್ತಿ ಬೆಳೆಯಬೇಕು ಎಂದರು.

ಕಲಬೆರಕೆ ಆಹಾರ ಸೇವನೆಯಿಂದ ಮನುಷ್ಯನ ಆರೋಗ್ಯ ಕೆಡುತ್ತಿದೆ. ಆಹಾರವೇ ಔಷಧವಾಗಬೇಕಲ್ಲದೇ ಔಷಧಿಯೇ ಆಹಾರವಾಗಬಾರದು. ಆರೋಗ್ಯ ಸಂಪತ್ತು ಎಲ್ಲ ಸಂಪತ್ತುಗಳಿಗಿಂತ ಶ್ರೇಷ್ಠ ಸಂಪತ್ತು. ಆರೋಗ್ಯ ಸೂತ್ರಗಳನ್ನು ಪರಿಪಾಲಿಸಿ ಜೀವನದಲ್ಲಿ ಮುನ್ನಡೆಯಬೇಕು. ಶಾಂತಿ ಮತ್ತು ನೆಮ್ಮದಿಯ ಬದುಕಿಗೆ ಆಧ್ಯಾತ್ಮದ ಅರಿವು, ಆಚರಣೆ ಮುಖ್ಯವೆಂದ ಶ್ರೀಗಳು, ನವರಾತ್ರಿಯ 4ನೇ ದಿನ ಕೂಷ್ಮಾಂಡಾ ದೇವಿ ಅರಾಧನೆಯಿಂದ ದೈವಿಕ ಇಚ್ಛೆಗಳು ಕೈಗೂಡುತ್ತವೆ. ಪ್ರಗತಿ ಮತ್ತು ಅಭ್ಯುದಯ ಪ್ರಾಪ್ತವಾಗುತ್ತದೆ ಎಂದರು.

ಬೆಳಗಾವಿ ಸಂಸದ, ಮಾಜಿ ಮುಖ್ಯಮಂತ್ರಿ ಜಗದೀಶ ಶೆಟ್ಟರ್ ಮಾತನಾಡಿ, ಭಾರತದ ಉಸಿರು ಧರ್ಮ ಮತ್ತು ಭಾವೈಕ್ಯತೆ. ಭಾರತೀಯ ಸಂಸ್ಕೃತಿ ಎಲ್ಲರನ್ನು ಒಗ್ಗೂಡಿಸುವುದಾಗಿದೆಯೇ ಹೊರತು ವಿಘಟಿಸುವುದಲ್ಲ. ದೇಶ ಉಳಿದರೆ ಧರ್ಮ, ಸಂಸ್ಕೃತಿ ಉಳಿಯಲು ಸಾಧ್ಯ. ಶ್ರೀ ರಂಭಾಪುರಿ ಜಗದ್ಗುರುಗಳು ನಿರಂತರ ಸಂಚರಿಸಿ ಧರ್ಮ ಪ್ರಜ್ಞೆ ಉಂಟು ಮಾಡುವುದಕ್ಕೆ ಈ ಸಮಾರಂಭ ಸಾಕ್ಷಿಯಾಗಿದೆ ಎಂದು ಹರುಷ ವ್ಯಕ್ತಪಡಿಸಿದರು.

ದೇವಾಪುರ-ಸ್ಟೇಷನ್ ಬಬಲಾದ ಶಿವಮೂರ್ತಿ ಶಿವಾಚಾರ್ಯರು ಸಮ್ಮುಖ ವಹಿಸಿದ್ದರು. ಮಳಲಿ ಸಂಸ್ಥಾನಮಠದ ಡಾ.ಗುರುನಾಗಭೂಷಣ ಶಿವಾಚಾರ್ಯರು ಪ್ರಾಸ್ತಾವಿಕ ಮಾತನಾಡಿದರು.

'ಆಹಾರ-ಆರೋಗ್ಯ ಮತ್ತು ಆಧ್ಯಾತ್ಮ' ಕುರಿತು ಉಪನ್ಯಾಸ ನೀಡಿದ ರಾಯಚೂರಿನ ಡಾ. ಅರುಣಾ ಹಿರೇಮಠ ಮಾತನಾಡಿ, ಜೀವನ ಶ್ರೇಯಸ್ಸಿಗೆ ಮತ್ತು ನೆಮ್ಮದಿಯ ಬದುಕಿಗೆ ಇವು ಮೂರು ಬಹಳ ಮುಖ್ಯ. ಆರೋಗ್ಯ ಒಂದಿದ್ದರೆ ಏನನ್ನಾದರೂ ಸಂಪಾದಿಸಲು ಸಾಧ್ಯ. ಸಾತ್ವಿಕ ಬದುಕು ರೂಪುಗೊಳ್ಳಲು ಸೇವಿಸುವ ಆಹಾರ ಮುಖ್ಯ. ಜೀವನದಲ್ಲಿ ಒಂದಿಷ್ಟಾದರೂ ಆಧ್ಯಾತ್ಮ ಸಾಧನೆಯನ್ನು ಮಾಡಿಕೊಂಡು ನಡೆದರೆ ಬದುಕು ಹಸನಾಗುವುದರಲ್ಲಿ ಸಂದೇಹ ಇಲ್ಲವೆಂದರು. ಮುಖ್ಯ ಅತಿಥಿಗಳಾಗಿ ವಿಜಯ ಬಾಬಣ್ಣ ಮೆಟಗುಡ್ಡ ಭಾಗವಹಿಸಿದ್ದರು.

ವೀರಾಪುರ-ಕಲಕೇರಿ ಮುದಕೇಶ್ವರ ಶಿವಾಚಾರ್ಯರು ಸ್ವಾಮಿಗಳು, ಎಲೆರಾಂಪುರ ಡಾ. ಹನುಮಂತನಾಥ ಸ್ವಾಮಿಗಳು, ಯಂಕಂಚಿ ರುದ್ರಮುನಿ ಶಿವಾಚಾರ್ಯರು, ಕಲಾದಗಿ ಗಂಗಾಧರ ಶಿವಾಚಾರ್ಯರು, ಇಟಗಿ-ನಿಡಗುಂದಿ ಷಣ್ಮುಖಪ್ಪಜ್ಜನವರು ಧರ್ಮರಮಠ, ಡಾ. ಆರ್.ಬಿ. ಬಸವರೆಡ್ಡೇರ್, ವೇ. ಷಣ್ಮುಖಯ್ಯ ಶಾಸ್ತ್ರಿಗಳು ಹಿರೇಮಠ, ಅಬ್ಬಿಗೇರಿ, ಮಾರುತಿ ಬಂಡಿವಡ್ಡರ್, ಸೂಡಿಯ ಶಿವಾನಂದಯ್ಯ ಲಿಂ. ಜುಕ್ತಿಹಿರೇಮಠ, ರುದ್ರಪ್ಪ ಸಂ.ಮಾರನಬಸರಿ, ಮಲ್ಲನಗೌಡ್ರು ಪ.ದೇಸಾಯಿ, ಪರತಪ್ಪ ಶಿ.ಪಟ್ಟಣಶೆಟ್ಟಿ ಹಾಗೂ ಶರಣಪ್ಪ ಈ.ನರಗುಂದ ಇವರಿಗೆ ಶ್ರೀ ರಂಭಾಪುರಿ ಜಗದ್ಗುರುಗಳು ಗುರುರಕ್ಷೆ ನೀಡಿ ಆಶೀರ್ವದಿಸಿದರು. ಕೊತಬಾಳದ ಶ್ರೀ ಅರುಣೋದಯ ಕಲಾ ತಂಡದವರು ಜಾನಪದ ನೃತ್ಯ ಪ್ರದರ್ಶಿಸಿದರು.

ಅಬ್ಬಿಗೇರಿಯ ಶಿಕ್ಷಕ ಮಲ್ಲಿಕಾರ್ಜುನ ಗುಗ್ಗರಿ ಸ್ವಾಗತಿಸಿದರು. ಶ್ರೀ ಜಗದ್ಗುರು ರೇಣುಕಾಚಾರ್ಯ ಗುರುಕುಲದ ಸಾಧಕರಿಂದ ವೇದಘೋಷ, ಗದಗಿನ ಗಾನಭೂಷಣ ವೀರೇಶ ಕಿತ್ತೂರ ಮತ್ತು ಪಾರ್ವತಿ ಮಹಿಳಾ ಬಳಗ ಹುಬ್ಬಳ್ಳಿ ಇವರಿಂದ ಸಂಗೀತ ಜರುಗಿತು. ಸುರೇಶ ಬೆನಕಟ್ಟಿ ತಬಲಾ ಸಾಥ ನೀಡಿದರು. ಶಿವಮೊಗ್ಗದ ಶಾಂತಾ ಆನಂದ ಇವರಿಂದ ನಿರೂಪಣೆ ನಡೆಯಿತು.

### ನಜರ್ ಸಮರ್ಪಣೆ

ಸಮಾರಂಭದ ನಂತರ ನಜರ್ ಸಮರ್ಪಣೆ ನಡೆಯಿತು. ಶ್ರೀ ಪೀಠದ ಸಿಬ್ಬಂದಿ ಹಾಗೂ ಪೀಠಾಭಿಮಾನಿಗಳು, ಆನೆ ಗಜಲಕ್ಷ್ಮಿ ಹಾಗೂ ಹಗಲು ದೀವಟಿಗೆಯವರು ಸಲ್ಲಿಸಿದ ನಜರ್ ಸಮರ್ಪಣೆ ಆಕರ್ಷಕವಾಗಿತ್ತು. ಫಾಲಾಕ್ಷಯ್ಯ ಅರಳೆಲೆಮಠ, ಬಸವರಾಜ ವೀರಾಪುರ, ಮಲ್ಲಿಕಾರ್ಜುನ ವೀರಾಪುರ ಸುರೇಶ ವೀರಾಪುರ, ಹಾಗೂ ಸತೀಶ ಪ್ರ. ವೀರಾಪುರ ಇವರಿಂದ ಅನ್ನ ದಾಸೋಹದ ಸೇವೆ ಜರುಗಿತು.

### ಪ್ರಶಸ್ತಿ ಪ್ರದಾನ

ದಾವಣಗೆರೆಯ ಹೆಚ್.ಎಂ. ಬಸವರಾಜಯ್ಯ (ಅಕ್ಕಿ ರಾಜು) ಇವರಿಗೆ 'ರಂಭಾಪುರಿ ಯುವಸಿರಿ' ಪ್ರಶಸ್ತಿ ಪ್ರದಾನ ಮಾಡಿ ಶ್ರೀ ರಂಭಾಪುರಿ ಜಗದ್ಗುರುಗಳು ಆಶೀರ್ವದಿಸಿದರು. ಬಸವನಬಾಗೇವಾಡಿ ಶಿವಪ್ರಕಾಶ ಶಿವಾಚಾರ್ಯರು ಪ್ರಶಸ್ತಿ ವಾಚನ ಮಾಡಿದರು.

> ಶುದ್ಧ ಹೃದಯವು ಭಗವಂತನ ದರ್ಶನಕ್ಕೆ ಹೋಗುವ ಹೆಬ್ಬಾಗಿಲು. ಮನುಷ್ಯ ದೇವರು ಮತ್ತು ಧರ್ಮವನ್ನು ಮರೆಯಬಾರದು. ನಿರಂತರ ಕ್ರಿಯಾಶೀಲತೆಯಿಂದ ಜೀವನ ಉಜ್ವಲಗೊಳ್ಳುವುದು. ಶ್ರೀ ರಂಭಾಪುರಿ ಜಗದ್ಗುರುಗಳ ದಸರಾ ಸಮ್ಮೇಳನ ಜೀವನ ವಿಕಾಸದ ಶ್ರೇಯಸ್ಸಿಗೆ ಕಾರಣವಾಗಿದೆ. ಸಮಾಜದ ಒಳ ಪಂಗಡಗಳ ಭೇದ ದೂರವಾಗಬೇಕು. ವೀರಶೈವ ಲಿಂಗಾಯತ ಎರಡೂ ಒಂದೇ ಎಂಬುದನ್ನು ಮರೆಯಬಾರದು.
>
> **- ಡಾ. ವಿಜಯ ಸಂಕೇಶ್ವರ.**
> ವ್ಹಿಆರ್‌ಎಲ್ ಸಂಸ್ಥೆಯ ಚೇರಮನ್,
> ಮಾಜಿ ಸಂಸದರು.

ನೇತೃತ್ವ ವಹಿಸಿದ ಸೂಡಿ ಜುಕ್ತಿ ಹಿರೇಮಠದ ಡಾ. ಕೊಟ್ಟೂರ ಬಸವೇಶ್ವರ ಶಿವಾಚಾರ್ಯರು ಮಾತನಾಡಿ, ಬಹು ಜನ್ಮದ ಪುಣ್ಯದ ಫಲದಿಂದ ಮಾನವ ಜನ್ಮ ಪ್ರಾಪ್ತವಾಗಿದೆ. ಜೀವನ ಅಭ್ಯುದಯಕ್ಕೆ ಕಾರಣವಾಗಿರುವ ಧರ್ಮಾಚರಣೆಯನ್ನು ಮರೆಯಬಾರದು. ಬುದ್ಧಿ ಭಾವನೆಗಳ ಪರಿಶುದ್ಧತೆಯಿಂದ ಬಾಳು ಉಜ್ವಲಗೊಳ್ಳುತ್ತದೆ. ಈ ನಿಟ್ಟಿನಲ್ಲಿ ಶ್ರೀ ರಂಭಾಪುರಿ ಜಗದ್ಗುರುಗಳ ಧರ್ಮ ಕಾರ್ಯಗಳು ನಡೆಯುತ್ತಿವೆ ಎಂದರು.



## ಮಾಜಿ ಶಾಸಕ ಮೊಹಿಯುದ್ದೀನ್ ಬಾವಾರ ಸಹೋದರ, ಉದ್ಯಮಿ ಮುಮ್ತಾಜ್ ಅಲಿ ನಾಪತ್ತೆ!



■ವಿಜಯಸಾಕ್ಷಿ ಸುದ್ದಿ, ಕುಳೂರು

ಕಾಂಗ್ರೆಸ್‌ನ ಮಾಜಿ ಶಾಸಕ ಮೊಹಿಯುದ್ದೀನ್ ಬಾವಾ ಮತ್ತು ಜೆಡಿಎಸ್ ನಾಯಕ ಬಿಎಂ ಫಾರೂಕ್ ಅವರ ಸಹೋದರ ಮುಮ್ತಾಜ್ ಅಲಿ ನಾಪತ್ತೆಯಾಗಿದ್ದು, ಪೊಲೀಸರು ಭಾನುವಾರ ಮುಂಜಾನೆ ಕುಳೂರು ಸೇತುವೆ ಬಳಿ ಅವರ ವಾಹನವನ್ನು ಪತ್ತೆ ಮಾಡಿದ್ದಾರೆ ಎಂದು ವರದಿಯಾಗಿದೆ. ಅವರು ಆತ್ಮಹತ್ಯೆ ಮಾಡಿಕೊಂಡಿದ್ದಾರೆ ಎಂದು ಶಂಕಿಸಲಾಗಿದೆ.

ಉದ್ಯಮಿಯಾಗಿರುವ ಮುಮ್ತಾಜ್ ಅಲಿ ಅವರು ಬೆಳಿಗ್ಗೆ 3 ಗಂಟೆಗೆ ಮನೆಯಿಂದ ಕಾರಿನೊಂದಿಗೆ ಹೊರಟು ನಗರದಾದ್ಯಂತ ಸುತ್ತಾಡಿದ್ದರು ಎಂದು ಪೊಲೀಸರು ತಿಳಿಸಿದ್ದಾರೆ. ಬೆಳಗಿನ ಜಾವ 5 ಗಂಟೆ ಸುಮಾರಿಗೆ ಕೂಳೂರು ಸೇತುವೆ ಬಳಿ ಕಾರು ನಿಲ್ಲಿಸಿ ನದಿಗೆ ಹಾರಿರಬಹುದು ಎಂದು ಪೊಲೀಸರು ಶಂಕಿಸಿದ್ದಾರೆ. ರಾಜ್ಯ ವಿಪತ್ತು ಪರಿಹಾರ ಪಡೆ ಮತ್ತು ಕೋಸ್ಟ್ ಗಾರ್ಡ್ ತಂಡಗಳು ನದಿಯಲ್ಲಿ ಶೋಧ ನಡೆಸುತ್ತಿವೆ.

ಸೇತುವೆ ಬಳಿ ಕಾರನ್ನು ನಿಲ್ಲಿಸುವ ಮುನ್ನ ಬಸ್‌ಗೂ ಡಿಕ್ಕಿ ಹೊಡೆದಿದ್ದರು ಎಂದು ವರದಿಯಾಗಿದೆ. ಹಾಗಾಗಿ ಅವರ ಕಾರು ಕೂಡಾ ಜಖಂಗೊಂಡಿದೆ. ಮುಮ್ತಾಜ್ ಪತ್ತೆಗೆ ಮುಳುಗು ತಜ್ಞ ಈಶ್ವರ್ ಮಲ್ಪೆ ಅವರ ಸಹಾಯವನ್ನೂ ಕೋರಿದ್ದೇವೆ ಎಂದು ಪೊಲೀಸ್ ಅಧಿಕಾರಿಯೊಬ್ಬರು ತಿಳಿಸಿದ್ದಾರೆ.

"ಮನೆಯಲ್ಲಿ ಜಗಳವಾಗಿದ್ದು, ನಂತರ ಅವರು ಮನೆಯಿಂದ ಹೊರಟುಹೋಗಿದ್ದರು. ಮಗಳಿಗೆ ಫೋನ್ ಮಾಡಿ ತಾನು ಸಾಯುತ್ತೇನೆ ಎಂದು ಹೇಳಿದ್ದರು. ಅವರು ಕಾರನ್ನು ನಿಲ್ಲಿಸಿ ಸ್ಥಳದಿಂದ ತೆರಳಿದ್ದಾರೊ ಅಥವಾ ನದಿಗೆ ಹಾರಿದ್ದಾರೊ ಎಂಬುದು ನಮಗೆ ತಿಳಿಯಬೇಕಿದೆ" ಎಂದು ಪೊಲೀಸ್ ಅಧಿಕಾರಿಯೊಬ್ಬರು ತಿಳಿಸಿದ್ದಾರೆ. ಮಂಗಳೂರು ನಗರ ಪೊಲೀಸ್ ಕಮಿಷನರ್ ಅನುಪಮ್ ಅಗರ್ವಾಲ್ ಮತ್ತು ಇತರ ಹಿರಿಯ ಪೊಲೀಸ್ ಅಧಿಕಾರಿಗಳು ಶೋಧ ಕಾರ್ಯಾಚರಣೆಯನ್ನು ಮೇಲ್ವಿಚಾರಣೆ ಮಾಡುತ್ತಿದ್ದಾರೆ.


### ಕನ್ನಡಿಗರ ಮನಗೆದ್ದ ಬಹುಮುಖ ಪ್ರತಿಭೆಯ ಪೂಜ್ಯ ಶ್ರೀ ಕುಮಾರದೇವರು

# ಸಕಲ ಕಲಾ ಸಂಪೂಜ್ಯ

'ಹಕ್ಕಿಗೂಡು ಬಿಟ್ಟ ಮೇಲೆ ಗೂಡಿಗೇನು ಬೆಲೆಯಿದೆ, ಹೃದಯ ಪ್ರೀತಿ ತೊರೆದ ಮೇಲೆ ಜೀವಕೆಲ್ಲಿ ಸುಖವಿದೆ?' ಬಹುಶಃ ಈ ಹಾಡು ಕೇಳಿರದ ಕನ್ನಡಿಗರು ಇರಲಿಕ್ಕಿಲ್ಲ. ಈ ಹಾಡಿನ ಮೂಲಕ ಕನ್ನಡಿಗರ ಮನಗೆದ್ದಿರುವ ಹೃದಯ ಪ್ರೀತಿಯನ್ನು ಗಳಿಸಿದ ಕವಿ, ಲೇಖಕ, ಪ್ರವಚನಕಾರ, ಸಮಾಜಸೇವಕ, 'ಅಂತುರೇಶ್ವರ' ಕಾವ್ಯನಾಮದಿಂದ ಗುರುತಿಸಿಕೊಂಡಿರುವ ಪೂಜ್ಯ ಶ್ರೀ ಕುಮಾರದೇವರು ಗದಗ ತಾಲೂಕಿನ ಅಂತೂರ-ಬೆಂತೂರ ಬೂದಿಸ್ವಾಮಿಮಠ, ಹಿರೇಮಠದ ಮಠಾಧಿಪತಿಗಳು.

ಸಂವೇದನಾಶೀಲ ಬರವಣಿಗೆಯಿಂದಾಗಿ ಆಶುಕವಿ, ವರಕವಿ, ಪ್ರವಚನ ಭಾಸ್ಕರ, ಸಾಧನಾ ಸತ್ಪುರುಷ ಎಂದೆಲ್ಲಾ ಪ್ರಖ್ಯಾತರಾಗಿದ್ದಾರೆ. ಇದಕ್ಕೆ ಕಾರಣ ಅವರಲ್ಲಿರುವ ಪ್ರತಿಭಾ ಸಂಪನ್ನತೆ, ಸರಳ ಸಜ್ಜನಿಕೆಯ ವಿಶಿಷ್ಟ ವ್ಯಕ್ತಿತ್ವ. ಸಾಹಿತ್ಯ ಸರಸ್ವತಿಯ ಆರಾಧಕರಾದ ಇವರ ಬರಹದ ಪ್ರತಿಯೊಂದು ಸಾಲು ಅರ್ಥಗರ್ಭಿತವಾಗಿದ್ದು, ಓದುಗರ ಹೃದಯ ತಟ್ಟುತ್ತವೆ. ಮಾನಸಿಕ ಪರಿವರ್ತನೆಗೆ ಸಹಾಯಕಾರಿಯಾಗಿವೆ.

ಪ್ರತಿಭಾ ಸಂಪನ್ನರಾದ ಇವರ ಪ್ರತೀ ಬರಹದಲ್ಲೂ ಗೇಯಗುಣ, ಕನ್ನಡ ವ್ಯಾಕರಣ, ಛಂದಸ್ಸಿನ ವಿಶೇಷತೆ ನಿಚ್ಚಳವಾಗಿ ಕಂಡುಬರುತ್ತದೆ. ಕಾವ್ಯ, ಆಧುನಿಕ ವಚನ, ನಾಟಕ, ಪುರಾಣ, ತ್ರಿಪದಿ ತತ್ತ್ವ, ಜಾನಪದ, ಭಾವಗೀತೆ ರಚನೆಯಲ್ಲಿ ಪಳಗಿದ್ದಾರಲ್ಲದೆ, ಪ್ರವಚನ, ಗಾಯನ, ವಾದ್ಯ ನುಡಿಸುವಿಕೆಯಲ್ಲೂ ಇವರ ಹೆಗ್ಗಳಿಕೆ ಅಸಾಧಾರಣ, ಅನುಪಮವಾದುದು.




ಜನ್ಮತಃ ಪ್ರತಿಭಾವಂತರು, ಸ್ನಾತಕೋತ್ತರ ಪದವಿ (ಕನ್ನಡ ಜಾನಪದ) ಹಾಗೂ ಸಂಸ್ಕೃತದಲ್ಲಿ ವಿದ್ವತ್, ಸಂಗೀತದಲ್ಲಿ ಸೀನಿಯರ್ ಪದವೀಧರರಲ್ಲದೇ, ಯೋಗ, ಯೋಗಾಸನ, ಅಧ್ಯಾತ್ಮಗಳಲ್ಲಿ ಸಿದ್ಧಿ ಪಡೆದಿದ್ದಾರೆ. ಕನ್ನಡದ ಇತಿಹಾಸದಲ್ಲಿ ಭಾಮಿನೀ ಷಟ್ಪದಿಯೊಳಗೆ ಹತ್ತು ಸಾವಿರಕ್ಕೂ ಹೆಚ್ಚು ಪದ್ಯಗಳನ್ನು ರಚಿಸಿ ದಾಖಲೆ ನಿರ್ಮಿಸಿದ್ದಾರೆ.

ಭಾವಯಾನ, ಗೀತರತ್ನ, ಅಂತೂರ ಬೆಂತೂರ ಬೂದಿಸ್ವಾಮಿ ಭಕ್ತಿಗೀತೆಗಳು, ಹೇಮರೆಡ್ಡಿ ಮಲ್ಲಮ್ಮನ ಭಕ್ತಿಗೀತೆಗಳು, ವಿಭೂತಿ ಪುರುಷರು, ಅಮರಾತ್ಮರ ಗೀತಗುಚ್ಛ, ಗೀತಗಂಗಾ, ಹಂಪಿ ಹೊರನೋಡು ಉಜ್ಜಯಿನಿ ಒಳನೋಡು, ಬೆಳ್ಳುಬ್ಬಿ ಬೆಳಗು, ನರಗುಂದ ಚನ್ನಬಸವ ಗೀತ ಪ್ರಭ, ಶ್ರೀ ಕುಮಾರೇಶ್ವರ ಭಕ್ತಿಗೀತೆ, ಶ್ರೀ ಸಿದ್ಧಲಿಂಗ ಗೀತೆ, ರಾಜಾಧಿರಾಜ ಗುರು ಪುಟ್ಟರಾಜ, ಜಗದೀಶ್ವರ ಭಕ್ತಿ ಭಾವಗೀತೆ, ಅಕ್ಕಿಆಲೂರು ಚನ್ನ ಬೆಳಗು, ವೇದವತಿ ಶಿವಸಿದ್ಧ ಪಂಚಾಕ್ಷರ, ಮದ್ದಾನೀಶ್ವರ ಭಕ್ತಿಗೀತೆಗಳು, ಭಾವ, ರಾಗ, ತಾಳಗಳ ಸಮನ್ವತೆಯು ಈ ಎಲ್ಲಾ ಧ್ವನಿ ತಟ್ಟೆಗಳ ಅಂತಃಸತ್ವವಾಗಿದೆ. ಹಾಡುಗಳ ಒಳಹೂರಣವು ಭಕ್ತಿ ಭಾವದಿಂದ ಕೂಡಿದ್ದು ಸಮಾಜದ ಮೇಲೆ ಸತ್ಪರಿಣಾಮವನ್ನುಂಟು ಮಾಡುತ್ತಿವೆ.

ಇವರ ಬರಹಗಳು ಪ್ರಾದೇಶಿಕ ಹಾಗೂ ರಾಷ್ಟ್ರಮಟ್ಟದ ಮಾಸಿಕ ಮತ್ತು ಪಾಕ್ಷಿಕ ಪತ್ರಿಕೆಗಳಲ್ಲಿ ಪ್ರಕಟಗೊಂಡಿವೆ. ಹಠಯೋಗಿ ಕೋಡಿಕೊಪ್ಪದ ಶ್ರೀ ವೀರಪ್ಪಜ್ಜ, ಕೆಳದೀ ಡಾ.ಗುರುಸಿದ್ದೇಶ್ವರ, ಶಿರಹಟ್ಟಿ ಜಗದ್ಗುರು ಫಕ್ಕೀರ ಸಿದ್ಧರಾಮೇಶ್ವರ, ಹಾನಗಲ್ಲ ಶ್ರೀ ಕುಮಾರೇಶ್ವರ, ತೋಂಟದ ಶ್ರೀ ಸಿದ್ಧಲಿಂಗೇಶ್ವರ, ದುಧನಿ ಶ್ರೀ ಶಾಂತಲಿಂಗೇಶ್ವರ, ರೇಕುಳಗಿ ಶ್ರೀ ಶಂಭುಲಿಂಗೇಶ್ವರ, ಕಾರಟಗಿ ಶ್ರೀ ವಿರೂಪಾಕ್ಷೇಶ್ವರ, ಚಿಕ್ಕಕೊಡಗಲಿ ಶ್ರೀ ಮಹಾಲಿಂಗೇಶ್ವರ, ಕೋಲ್ದಾರದ ಶ್ರೀ ಕಲ್ಲಪ್ಪಯ್ಯ ಶಿವಯೋಗೀಶ್ವರ ಮುಂತಾದ ಆಧುನಿಕ ಪುರಾಣ ಕಾವ್ಯಗಳು ಹಾಗೂ ಬೂದೀಶ ಪರಿಸರ ಗೀತೆಗಳು, ಭಾವ ಬೆಳಗು ಕವನ ಸಂಕಲನಗಳು, ಅಂತುರೇಶ್ವರ ವಚನ ಭಾಗ-1, 2, ಅಂತೂರ ಬೆಂತೂರ ಬೂದಿಸ್ವಾಮಿ ಲೀಲಾಮೃತ, ಮಸೂತಿ ಮಠದ ವೈಭವ, ಮಡಕಿ ಹೊನ್ನಳ್ಳಿ ಶ್ರೀ ಕಲ್ಲಪ್ಪಯ್ಯ ಶಿವಯೋಗಿ, ಗೋನವಾರ ವಿರೂಪಾಕ್ಷೇಶ್ವರ ಲೀಲೆ ಸೇರಿದಂತೆ ಐವತ್ತಕ್ಕೂ ಹೆಚ್ಚು ಮೌಲಿಕ ಗದ್ಯ-ಪದ್ಯ ಗ್ರಂಥಗಳು ಪ್ರಕಟಗೊಂಡಿವೆ.

ಸಾಮಾಜಿಕ ಸೇವೆಯಲ್ಲಿ ತನು-ಮನ-ಧನ ವಿನಿಯೋಗಿಸುವ ತ್ರಿವಿಧ ದಾಸೋಹಿಗಳು, ಅನೇಕ ಸಂಘ ಸಂಸ್ಥೆ, ಮಠಗಳು ಇವರ ಬಹುಮುಖ ಪ್ರತಿಭೆಯನ್ನು ಪರಿಗಣಿಸಿ ಆಶುಕವಿ, ಸಕಲ ಕಲಾ ಸಂಪೂಜ್ಯ, ಸಾಹಿತ್ಯ ಸಿರಿ, ಪ್ರವಚನ ಭಾಸ್ಕರ, ಅಭಿನವ ಕುಮಾರವ್ಯಾಸ ಮುಂತಾದ ಪ್ರಶಸ್ತಿ ನೀಡಿ ಗೌರವಿಸಿದ್ದಾರೆ.

ಇವರ ಕಾವ್ಯಗಳು ಪಿ.ಎಚ್.ಡಿ ಪ್ರಬಂಧಗಳಿಗೆ ಬಳಕೆಯಾಗಿವೆ. ಇವರ ಕುರಿತು ಪಿ.ಎಚ್.ಡಿ ಮಾಡಬಹುದಾದಷ್ಟು ಹೇರಳವಾದ ಸಾಹಿತ್ಯ ಸಿಗುವುದೆಂದು ಹೇಳಲು ಹೆಮ್ಮೆ ಎಂದೆನಿಸುತ್ತದೆ. ಉತ್ತರ ಕರ್ನಾಟಕದ ಚಿಕ್ಕ ಹಳ್ಳಿಯೊಂದರಲ್ಲಿದ್ದು ದುಶ್ಚಟ ನಿರ್ಮೂಲನೆಗಾಗಿ 'ಸದ್ಭಾವನಾ ಪಾದಯಾತ್ರೆ' ಹಳ್ಳಿ ಹಳ್ಳಿಗಳಲ್ಲಿ ಮಾಡುವರು, ಭಾವೈಕ್ಯತೆಯನ್ನು ಬೆಳೆಸುವದರ ಜೊತೆಗೆ ಸಮಾಜ ಸುಧಾರಣೆಗೆ ಹತ್ತು ಹಲವಾರು ಅದ್ಭುತ ಸಾಧನೆಗಳನ್ನು ಮೂವತ್ತಕ್ಕೂ ಹೆಚ್ಚು ವರ್ಷಗಳಿಂದ ಮಾಡುತ್ತಿರುವ ಇವರ ನಿಸ್ವಾರ್ಥ ಸೇವೆಯನ್ನು ಯಾವ ಸರ್ಕಾರಗಳೂ ಗುರುತಿಸಿ ಪ್ರಶಸ್ತಿಗಳನ್ನು ನೀಡದೇ ಗೌರವಿಸದೇ ಇರುವುದು, ಒಂದು ರೀತಿಯ ಕುರುಡುತನವಾಗಿದೆ.

**- ಡಾ.ರಘುಶಂಖ ಭಾತಂಬ್ರಾ.**
ಸಂಪಾದಕರು, ಶಾಂತಿಕಿರಣ ಮಾಸಪತ್ರಿಕೆ.
ಹಿರೇಮಠ ಸಂಸ್ಥಾನ, ಭಾಗ್ಯ, ಬೀದರ ಜಿಲ್ಲೆ.

## ಕೋಲ್ಕತ್ತಾ । ಉಪವಾಸ ಸತ್ಯಾಗ್ರಹ ಮುಂದುವರೆಸಿದ ಕಿರಿಯ ವೈದ್ಯರು!

■ವಿಜಯಸಾಕ್ಷಿ ಸುದ್ದಿ, ಕೋಲ್ಕತ್ತಾ

ಆರ್‌ಜಿ ಕರ್ ಮೆಡಿಕಲ್ ಕಾಲೇಜು ಮತ್ತು ಆಸ್ಪತ್ರೆಯ ಮಹಿಳಾ ಸಹೋದ್ಯೋಗಿಯ ಅತ್ಯಾಚಾರ ಮತ್ತು ಕೊಲೆಗೆ ನ್ಯಾಯ ನೀಡುವಂತೆ ಆಗ್ರಹಿಸಿ ಪ್ರತಿಭಟಿಸುತ್ತಿದ್ದ ಕಿರಿಯ ವೈದ್ಯರು, ಮಧ್ಯ ಕೋಲ್ಕತ್ತಾದ ಧರ್ಮತಾಲಾದಲ್ಲಿ ಭಾನುವಾರ ಆಮರಣಾಂತ ಉಪವಾಸ ಸತ್ಯಾಗ್ರಹವನ್ನು ಮುಂದುವರೆಸಿದ್ದಾರೆ. ರಾಜ್ಯ ಸರ್ಕಾರ ವೈದ್ಯರ ಬೇಡಿಕೆಗಳನ್ನು ಈಡೇರಿಸಲು ವಿಫಲವಾದ ನಂತರ ಶನಿವಾರ ರಾತ್ರಿ 8:30ರ ನಂತರ ಉಪವಾಸ ಸತ್ಯಾಗ್ರಹ ಆರಂಭವಾಯಿತು. ಶನಿವಾರ ರಾತ್ರಿಯಿಂದ ಪ್ರತಿಭಟನಾ ಸ್ಥಳದಲ್ಲಿ ಹಾಜರಿದ್ದ ಹಲವಾರು ಹಿರಿಯ ವೈದ್ಯರು ತಮ್ಮ ಕಿರಿಯ ವೈದ್ಯರೊಂದಿಗೆ ಮುಷ್ಕರದಲ್ಲಿ ಪಾಲ್ಗೊಳ್ಳಲು ಯೋಚಿಸುತ್ತಿದ್ದಾರೆ.

"ಈ ಜನರ ಬೆಂಬಲವು ನಮ್ಮ ಸಹೋದರಿಯ ಭೀಕರ ಹತ್ಯೆಯ ವಿರುದ್ಧ ನಮ್ಮ ಪ್ರತಿಭಟನೆಯನ್ನು ಮುಂದುವರಿಸಲು ಧೈರ್ಯ ಮತ್ತು ಉತ್ಸಾಹವನ್ನು ನೀಡುತ್ತದೆ. ನಮ್ಮ ಬೇಡಿಕೆಗಳನ್ನು ರಾಜ್ಯ ಸರ್ಕಾರ ಗಂಭೀರವಾಗಿ ಪರಿಗಣಿಸದಿದ್ದರೂ, ನ್ಯಾಯ ಸಿಗದಿರುವುದನ್ನು ಜನರು ಇನ್ನೂ ಮರೆತಿಲ್ಲ. ರಾಜ್ಯ ಸರ್ಕಾರ ನಮ್ಮ ಬೇಡಿಕೆಗಳನ್ನು ಗಂಭೀರವಾಗಿ ಪರಿಗಣಿಸದಿದ್ದರೂ ವೈದ್ಯರ ಮೇಲಿನ ದಾಳಿಗಳು ನಡೆಯುತ್ತಲೇ ಇವೆ" ಎಂದು ಪ್ರತಿಭಟನಾನಿರತ ವೈದ್ಯರಲ್ಲಿ ಒಬ್ಬರಾದ ದೇಬಾಶಿಶ್ ಹಲ್ದರ್ ಹೇಳಿದ್ದಾರೆ.

ಕೋಲ್ಕತ್ತಾ ಪೊಲೀಸ್ ಸಿಬ್ಬಂದಿ ನಡೆಸಿದ್ದಾರೆ ಎನ್ನಲಾದ ಆಪಾದಿತ ಹಲ್ಲೆಯ ನಂತರ ಪ್ರತಿಭಟನಾಕಾರರು ಈ ಹಿಂದೆ ಶುಕ್ರವಾರ ಧರ್ಮತಾಲಾದ ಡೋರಿನಾ ಕ್ರಾಸಿಂಗ್‌ನಲ್ಲಿ ಧರಣಿ ಪ್ರತಿಭಟನೆಯನ್ನು ಪ್ರಾರಂಭಿಸಿದ್ದರು. ಪ್ರತಿಭಟನೆಯ ಸಂದರ್ಭದಲ್ಲಿ ಪಾರದರ್ಶಕತೆ ಕಾಪಾಡಲು ಕಿರಿಯ ವೈದ್ಯರು ತಮ್ಮ ಸಹೋದ್ಯೋಗಿಗಳು ಉಪವಾಸ ಸತ್ಯಾಗ್ರಹ ನಡೆಸುತ್ತಿರುವ ವೇದಿಕೆಯಲ್ಲಿ ಸಿಸಿಟಿವಿ ಕ್ಯಾಮೆರಾಗಳನ್ನು ಅಳವಡಿಸಿದ್ದಾರೆ.ಕೋಲ್ಕತ್ತಾ

ಉಪವಾಸದಲ್ಲಿ ಭಾಗವಹಿಸಿದ ಆರು ವೈದ್ಯರನ್ನು ಕೋಲ್ಕತ್ತಾ ವೈದ್ಯಕೀಯ ಕಾಲೇಜು ಮತ್ತು ಆಸ್ಪತ್ರೆಯ ಸ್ನಿಗ್ಧಾ ಹಜ್ರಾ, ತನಯಾ ಪಂಜಾ ಮತ್ತು ಅನುಸ್ತುಪ್ ಮುಖೋಪಾಧ್ಯಾಯ, ಎಸ್‌ಎಸ್‌ಕೆಎಂ ಆಸ್ಪತ್ರೆಯ ಅರ್ನಾಬ್ ಮುಖೋಪಾಧ್ಯಾಯ, ಎನ್‌ಆರ್‌ಎಸ್ ವೈದ್ಯಕೀಯ ಕಾಲೇಜು ಮತ್ತು ಆಸ್ಪತ್ರೆಯ ಪುಲಸ್ತ ಆಚಾರ್ಯ ಮತ್ತು ಕೆಪಿಸಿ ವೈದ್ಯಕೀಯ ಕಾಲೇಜಿನ ಸಯಂತನಿ ಘೋಷ್ ಹಜ್ರಾ ಎಂದು ಗುರುತಿಸಲಾಗಿದೆ. ಉಪವಾಸ ಸತ್ಯಾಗ್ರಹದ ವೇಳೆ ತಮ್ಮ ಸಹೋದ್ಯೋಗಿಗಳಿಗೆ ಯಾರಾದರೂ ಅಸ್ವಸ್ಥರಾದರೆ ರಾಜ್ಯವೇ ಹೊಣೆಯಾಗಲಿದೆ ಎಂದು ಕಿರಿಯ ವೈದ್ಯರು ಎಚ್ಚರಿಸಿದ್ದಾರೆ.

### ಲೈಂಗಿಕ ಕಿರುಕುಳ ಆರೋಪದ ಹಿನ್ನೆಲೆ

## ನೃತ್ಯ ನಿರ್ದೇಶಕ ಜಾನಿ ಮಾಸ್ಟರ್‌ನ ರಾಷ್ಟ್ರೀಯ ಪ್ರಶಸ್ತಿ ಅಮಾನತು

■ವಿಜಯಸಾಕ್ಷಿ ಸುದ್ದಿ, ನವದೆಹಲಿ

ಲೈಂಗಿಕ ದೌರ್ಜನ್ಯದ ಆರೋಪಗಳನ್ನು ಉಲ್ಲೇಖಿಸಿ ನೃತ್ಯ ನಿರ್ದೇಶಕ ಜಾನಿ ಮಾಸ್ಟರ್ ಅವರಿಗೆ ನೀಡಬೇಕಾದ ರಾಷ್ಟ್ರೀಯ ಚಲನಚಿತ್ರ ಪ್ರಶಸ್ತಿಯನ್ನು ಮಾಹಿತಿ ಮತ್ತು ಪ್ರಸಾರ ಸಚಿವಾಲಯದ ರಾಷ್ಟ್ರೀಯ ಚಲನಚಿತ್ರ ಪ್ರಶಸ್ತಿ ವಿಭಾಗ ಅಮಾನತುಗೊಳಿಸಿದೆ. ಮಂಗಳವಾರ ನವದೆಹಲಿಯಲ್ಲಿ ನಡೆದ 70ನೇ ರಾಷ್ಟ್ರೀಯ ಚಲನಚಿತ್ರ ಪ್ರಶಸ್ತಿ ಪ್ರದಾನ ಸಮಾರಂಭದಲ್ಲಿ ಪಾಲ್ಗೊಳ್ಳುವಂತೆ ನೃತ್ಯ ನಿರ್ದೇಶಕರಿಗೆ ನೀಡಿದ್ದ ಆಹ್ವಾನವನ್ನೂ ಅಧಿಕಾರಿಗಳು ಹಿಂಪಡೆದಿದ್ದಾರೆ.

2022 ರ ತಮಿಳು ಚಲನಚಿತ್ರ "ತಿರುಚಿತ್ರಂಬಲಂ" ನಿಂದ "ಮೇಘಂ ಕರುಕ್ಕಥಾ" ಹಾಡಿನ ಕೆಲಸಕ್ಕಾಗಿ ಅವರಿಗೆ ಪ್ರಶಸ್ತಿ ಘೋಷಣೆಯಾಗಿತ್ತು.

ಅಕ್ಟೋಬರ್ 4ರ ಶುಕ್ರವಾರ ಬಿಡುಗಡೆಯಾದ ದಿನಾಂಕದ ಟಿಪ್ಪಣಿಯಲ್ಲಿ, "ಆಪಾದನೆಯ ಗಂಭೀರತೆ ಮತ್ತು ಪ್ರಕರಣವು ನ್ಯಾಯಸಮ್ಮತವಾಗಿರುವ ಕಾರಣ, ಸಕ್ಷಮ ಪ್ರಾಧಿಕಾರವು ತಿರುಚಿತ್ರಂಬಲಂ ಚಿತ್ರಕ್ಕಾಗಿ ಶ್ರೀ ಶೇಕ್ ಜಾನಿ ಬಾಷಾ ಅವರಿಗೆ 2022 ರ ಅತ್ಯುತ್ತಮ ನೃತ್ಯ ಸಂಯೋಜನೆಯ ರಾಷ್ಟ್ರೀಯ ಚಲನಚಿತ್ರ ಪ್ರಶಸ್ತಿಯನ್ನು ಮುಂದಿನ ಆದೇಶದವರೆಗೆ ಅಮಾನತುಗೊಳಿಸಲು ನಿರ್ಧರಿಸಿದೆ" ಎಂದು ಹೇಳಿದೆ.



"ಆದ್ದರಿಂದ, 8.10.24 ರಂದು ನವದೆಹಲಿಯ ವಿಜ್ಞಾನ ಭವನದಲ್ಲಿ 70 ನೇ ರಾಷ್ಟ್ರೀಯ ಚಲನಚಿತ್ರ ಪ್ರಶಸ್ತಿ ಸಮಾರಂಭಕ್ಕೆ ಶ್ರೀ ಶೇಕ್ ಜಾನಿ ಬಾಷಾ ಅವರಿಗೆ ನೀಡಲಾದ ಆಹ್ವಾನವನ್ನು ಈ ಮೂಲಕ ಹಿಂಪಡೆಯಲಾಗಿದೆ" ಎಂದು ಉಪ ನಿರ್ದೇಶಕಿ ಇಂದ್ರಾಣಿ ಬೋಸ್ ಸಹಿ ಹಾಕಿರುವ ಟಿಪ್ಪಣಿಯನ್ನು ಹೇಳಲಾಗಿದೆ.

ರಾಷ್ಟ್ರೀಯ ಚಲನಚಿತ್ರ ಪ್ರಶಸ್ತಿ ಸಮಾರಂಭದಲ್ಲಿ ಪಾಲ್ಗೊಳ್ಳಲು ಜಾನಿ ಮಾಸ್ಟರ್ ಜಾಮೀನು ಅರ್ಜಿ ಸಲ್ಲಿಸಿದ ಹಿನ್ನೆಲೆಯಲ್ಲಿ ನಗರದ ನ್ಯಾಯಾಲಯ ಗುರುವಾರ ಮಧ್ಯಂತರ ಜಾಮೀನು ಮಂಜೂರು ಮಾಡಿದೆ.

ಕಳೆದ ತಿಂಗಳು, ಜಾನಿ ಮಾಸ್ಟರ್ ಅವರ ಸಹಾಯಕಿಯಾಗಿ ಕೆಲಸ ಮಾಡುತ್ತಿದ್ದ ಮಹಿಳೆಯೊಬ್ಬರು ಪೊಲೀಸರಿಗೆ ನೀಡಿದ ದೂರಿನಲ್ಲಿ, ನೃತ್ಯ ನಿರ್ದೇಶಕರು 2020 ರಲ್ಲಿ ಮುಂಬೈಯ ಕೆಲಸದ ಪ್ರವಾಸದ ಸಮಯದಲ್ಲಿ ತನ್ನ ಮೇಲೆ ಲೈಂಗಿಕ ದೌರ್ಜನ್ಯ ಎಸಗಿದ್ದಾರೆ ಮತ್ತು ಲೈಂಗಿಕ ಕಿರುಕುಳವನ್ನು ಮುಂದುವರೆಸಿದ್ದಾರೆ ಮತ್ತು ಅದನ್ನು ಯಾರಿಗೂ ಬಹಿರಂಗಪಡಿಸದಂತೆ ಬೆದರಿಕೆ ಹಾಕಿದ್ದಾರೆ ಎಂದು ಆರೋಪಿಸಿದ್ದರು.

ಸೆಪ್ಟೆಂಬರ್ 15 ರಂದು, ನರಸಿಂಗಿ ಪೊಲೀಸರು ನೃತ್ಯ ನಿರ್ದೇಶಕರ ವಿರುದ್ಧ ಐಪಿಸಿಯ 376 (2) (ಎನ್), 506, 323 (ಅತ್ಯಾಚಾರ, ನೋವುಂಟುಮಾಡುವುದು ಮತ್ತು ಇತರ ಅಪರಾಧಗಳಿಗೆ ಸಂಬಂಧಿಸಿದ) ಸೆಕ್ಷನ್‌ಗಳ ಅಡಿಯಲ್ಲಿ ಪ್ರಕರಣ ದಾಖಲಿಸಿದ್ದಾರೆ. ಯುವತಿಯ ಹೇಳಿಕೆಯನ್ನು ದಾಖಲಿಸಿಕೊಂಡ ಪೊಲೀಸರು, ಆಪಾದಿತ ಅಪರಾಧದ ಸಮಯದಲ್ಲಿ ಯುವತಿ ಅಪ್ರಾಪ್ತ ವಯಸ್ಕಳಾಗಿದ್ದಳು ಎಂದು ತಿಳಿದುಬಂದಿದೆ.

### ರೈಲು ಹಳಿಗಳಲ್ಲಿ ಕುಕ್ಕರ್ ಬಾಂಬ್

## 6 ದುಷ್ಕರ್ಮಿಗಳಿಗೆ ಜೈಲು ಶಿಕ್ಷೆ ವಿಧಿಸಿದ INA ಕೋರ್ಟ್

■ವಿಜಯಸಾಕ್ಷಿ ಸುದ್ದಿ, ಪಾಟ್ನಾ

ಪಾಟ್ನಾದ ರಾಷ್ಟ್ರೀಯ ತನಿಖಾ ಸಂಸ್ಥೆ (ಎನ್‌ಐಎ) ವಿಶೇಷ ನ್ಯಾಯಾಲಯವು ಬಿಹಾರದ ಪೂರ್ವ ಚಂಪಾರಣ್ ಜಿಲ್ಲೆಯ ಘೋರಸಾಹನ್ ಬಳಿಯ ರೈಲು ಹಳಿಗಳ ಮೇಲೆ ಸುಧಾರಿತ ಸ್ಫೋಟಕ ಸಾಧನವನ್ನು (ಐಇಡಿ) ಇಟ್ಟ 2016ರ ಪ್ರಕರಣದಲ್ಲಿ ಆರು ಆರೋಪಿಗಳಿಗೆ ಭಾರತೀಯ ದಂಡ ಸಂಹಿತೆಯ (ಐಪಿಸಿ) ವಿವಿಧ ಸೆಕ್ಷನ್‌ಗಳ ಅಡಿಯಲ್ಲಿ ಜೈಲು ಶಿಕ್ಷೆ ಮತ್ತು ದಂಡವನ್ನು ವಿಧಿಸಿದೆ.

ಶನಿವಾರ ತಡರಾತ್ರಿ ಬಿಡುಗಡೆ ಮಾಡಿದ ಪತ್ರಿಕಾ ಹೇಳಿಕೆಯಲ್ಲಿ, ಆರೋಪಿಗಳು ಸೆಪ್ಟೆಂಬರ್ 30, 2016 ರಂದು ಪಶ್ಚಿಮ ಚಂಪಾರಣ್ ಜಿಲ್ಲೆಯ ನರ್ಕಟಿಯಾಗಂಜ್‌ನಿಂದ ಬರುತ್ತಿದ್ದ ಪ್ಯಾಸೆಂಜರ್ ರೈಲನ್ನು ಸ್ಫೋಟಿಸುವ ಉದ್ದೇಶದಿಂದ ರೈಲ್ವೇ ಹಳಿಯಲ್ಲಿ ಪ್ರೆಶರ್ ಕುಕ್ಕರ್ ಐಇಡಿ ಇಟ್ಟಿದ್ದರು ಎಂದು ತನಿಖಾ ಸಂಸ್ಥೆ ತಿಳಿಸಿದೆ.

ಆದಾಗ್ಯೂ, ಕೆಲವು ಸ್ಥಳೀಯ ನಿವಾಸಿಗಳು ಐಇಡಿಯನ್ನು ಗುರುತಿಸಿ ಸ್ಥಳೀಯ ಪೊಲೀಸರಿಗೆ ಮಾಹಿತಿ ನೀಡಿದ್ದರಿಂದ ದೊಡ್ಡ ದುರ್ಘಟನೆಯೊಂದು ತಪ್ಪಿ ಹೋಗಿತ್ತು.ರೈಲು ಹಳಿಗಳಲ್ಲಿ

ಆರೋಪಿಗಳನ್ನು



ಉಮಾಶಂಕರ್ ರಾವುತ್, ಗಜೇಂದ್ರ ಶರ್ಮಾ, ರಾಕೇಶ್ ಕುಮಾರ್ ಯಾದವ್, ಮುಖೇಶ್ ಕುಮಾರ್ ಯಾದವ್, ಮೋತಿಲಾಲ್ ಪಾಸ್ವಾನ್ ಮತ್ತು ರಂಜಯ್ ಕುಮಾರ್ ಶಾ ಅಲಿಯಾಸ್ ರಂ-ಜಯ್ ಎಂದು ಗುರುತಿಸಲಾಗಿದೆ.

ತನಿಖೆಯ ಸಮಯದಲ್ಲಿ ಇಬ್ಬರು ಆರೋಪಿಗಳನ್ನು ಪೂರ್ವ ಚಂಪಾರಣ್ ಜಿಲ್ಲೆಯ ಪೊಲೀಸರು ಬಂಧಿಸಿದ್ದರು. ಇತರ ಇಬ್ಬರನ್ನು ಎನ್‌ಐಎ ವಿವಿಧ ಸ್ಥಳಗಳಿಂದ ಬಂಧಿಸಿದೆ. ಏತನ್ಮಧ್ಯೆ, ಆರನೇ ಆರೋಪಿ ಫೆಬ್ರವರಿ 2017 ರಲ್ಲಿ ಶರಣಾಗಿದ್ದನು. ಓಖಂ ಅದೇ ವರ್ಷದ ಜುಲೈನಲ್ಲಿ ಎಲ್ಲಾ ಆರೋಪಿಗಳ ವಿರುದ್ಧ ಆರೋಪಪಟ್ಟಿ ಸಲ್ಲಿಸಿತ್ತು.

ಈ ವರ್ಷದ ಸೆಪ್ಟೆಂಬರ್ 24 ರಂದು, ವಿಶೇಷ ನ್ಯಾಯಾಧೀಶ ಅಭಿಜಿತ್ ಕುಮಾರ್ ನೇತೃತ್ವದ ಎನ್‌ಐಎ ನ್ಯಾಯಾಲಯವು ಆರೋಪಿಯನ್ನು ತಪ್ಪಿತಸ್ಥರೆಂದು ಘೋಷಿಸಿದ್ದು, ಅಕ್ಟೋಬರ್ 5 ರಂದು ತೀರ್ಪಿಗೆ ದಿನಾಂಕವನ್ನು ನಿಗದಿಪಡಿಸಿತ್ತು. ಐಪಿಸಿ, ಕಾನೂನುಬಾಹಿರ ಚಟುವಟಿಕೆಗಳು (ತಡೆಗಟ್ಟುವಿಕೆ) ಕಾಯ್ದೆ, ಸ್ಫೋಟಕ ವಸ್ತು ಕಾಯ್ದೆ ಮತ್ತು ರೈಲ್ವೆ ಕಾಯ್ದೆಯ ಸಂಬಂಧಿತ ಸೆಕ್ಷನ್‌ಗಳ ಅಡಿಯಲ್ಲಿ ಅವರ ವಿರುದ್ಧದ ಶಿಕ್ಷೆಯ ಪ್ರಮಾಣವನ್ನು ನ್ಯಾಯಾಲಯ ಪ್ರಕಟಿಸಿದೆ.

ನ್ಯಾಯಾಲಯವು ತನ್ನ ತೀರ್ಪಿನಲ್ಲಿ, ಎಲ್ಲಾ ಆರೋಪಿಗಳಿಗೆ ಐದು ವರ್ಷದಿಂದ 12 ವರ್ಷಗಳವರೆಗೆ ಜೈಲು ಶಿಕ್ಷೆ ಮತ್ತು ರೂ.5,000 ರಿಂದ ರೂ.12,000 ವರೆಗೆ ದಂಡ ವಿಧಿಸಿದೆ. ಆರೋಪಿಗಳು ದಂಡವನ್ನು ಪಾವತಿಸಲು ವಿಫಲವಾದರೆ, ಅವರ ಜೈಲು ಶಿಕ್ಷೆಯನ್ನು ಇನ್ನೂ ಮೂರು ತಿಂಗಳವರೆಗೆ ವಿಸ್ತರಿಸಲಾಗುವುದು ಎಂದು ಹೇಳಿದೆ.

ಈ ಮಧ್ಯೆ, ಪ್ರಕರಣದಲ್ಲಿ ಇನ್ನೂ ಮೂವರು ಆರೋಪಿಗಳು ತಲೆಮರೆಸಿಕೊಂಡಿದ್ದಾರೆ ಎಂದು ಎನ್‌ಐಎ ಮೂಲಗಳು ತಿಳಿಸಿವೆ. ಒಟ್ಟು ಒಂಬತ್ತು ಆರೋಪಿಗಳ ವಿರುದ್ಧ ಎನ್‌ಐಎ ಆರೋಪಪಟ್ಟಿ ಸಲ್ಲಿಸಿತ್ತು.

## ಕೇಂದ್ರ ಸರ್ಕಾರದಿಂದ ಜನಪರ ಯೋಜನೆಗಳು




■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಪಟ್ಟಣದಲ್ಲಿ ಶನಿವಾರ ರಹಟ್ಟಿ ಬಿಜೆಪಿ ಮಂಡಳ ಲಕ್ಷ್ಮೇಶ್ವರ ನಗರ ಘಟಕ ಹಾಗೂ ಯುವ ಮೋರ್ಚಾ ವತಿಯಿಂದ ಬಿಜೆಪಿ ಸದಸ್ಯತ್ವ ಅಭಿಯಾನಕ್ಕೆ ರಾಜ್ಯಸಭಾ ಸದಸ್ಯ ನಾರಾಯಣಸಾ ಭಾಂಡಗೆ ಚಾಲನೆ ನೀಡಿದರು.

ಈ ಸಂದರ್ಭದಲ್ಲಿ ಮಾತನಾಡಿದ ಅವರು, ಜಗತ್ತಿನಲ್ಲಿಯೇ ಅತಿ ಹೆಚ್ಚು ಕಾರ್ಯಕರ್ತರನ್ನು ಹೊಂದಿರುವ ಏಕೈಕ ರಾಷ್ಟ್ರೀಯ ಪಕ್ಷ ಬಿಜೆಪಿ ಆಗಿದ್ದು, ಕೊಟ್ಯಾಂತರ ಕಾರ್ಯಕರ್ತರ ಪಡೆಯನ್ನು ಪಕ್ಷ ಹೊಂದಿದೆ. ಪ್ರಧಾನಮಂತ್ರಿ ನರೇಂದ್ರ ಮೋದಿಯವರ ನೇತೃತ್ವದಲ್ಲಿನ 3.0 ಸರಕಾರ ಈಗಾಗಲೇ ಅನೇಕ ಜನಪರ ಯೋಜನೆಗಳನ್ನು ಜಾರಿಗೆ ತಂದಿದೆ. ಕೃಷಿ, ಕೈಗಾರಿಕೆ, ವಾಣಿಜ್ಯ, ಸಾರಿಗೆ ಸಂಪರ್ಕ, ವಿಮಾನಯಾನ ಸೇರಿದಂತೆ ಎಲ್ಲಾ ಕ್ಷೇತ್ರಗಳಲ್ಲಿ ಪ್ರಗತಿ ಕಾಣುತ್ತಿದೆ. ಭಾರತ ವಿಶ್ವಗುರು ಆಗುತ್ತಿದ್ದು, ಇನ್ನೂ ಕೆಲ ವರ್ಷಗಳಲ್ಲಿ ಅತ್ಯಂತ ಪ್ರಬಲ ರಾಷ್ಟ್ರವಾಗಿ ಪ್ರಗತಿ ಹೊಂದಲಿದೆ. ರಾಷ್ಟ್ರ ನಿರ್ಮಾಣಕ್ಕೆ ಬಿಜೆಪಿ ಪಕ್ಷದ ಸದಸ್ಯತ್ವ ಪಡೆಯಬೇಕು. ಯುವ ಸಮೂಹವನ್ನು ಬಿಜೆಪಿಯತ್ತ ಸೆಳೆಯಲು ಕಾರ್ಯಕರ್ತರು ಪ್ರಾಮಾಣಿಕ ಕಾರ್ಯ ಮಾಡಬೇಕು ಎಂದು ಕರೆ ನೀಡಿದರು.

ಈ ಸಂದರ್ಭದಲ್ಲಿ ಶಾಸಕ ಡಾ. ಚಂದ್ರು ಲಮಾಣಿ, ಪುರಸಭೆ ಸದಸ್ಯೆ ಅಶ್ವಿನಿ ಅಂಕಲಕೋಟಿ, ಜಿಲ್ಲಾ ಪ್ರ. ಕಾರ್ಯದರ್ಶಿ ಫಕ್ಕೀರೇಶ ರಟ್ಟೀಹಳ್ಳಿ, ಶಿರಹಟ್ಟಿ ಮಂಡಳ ಪ್ರ. ಕಾರ್ಯದರ್ಶಿ ಅನಿಲ ಮುಳಗುಂದ, ನಗರ ಅಧ್ಯಕ್ಷ ನವೀನ ಬೆಳ್ಳಟ್ಟಿ, ಯುವ ಮೋರ್ಚಾ ಅಧ್ಯಕ್ಷ ಬಸವರಾಜ ಚಕ್ರಸಾಲಿ, ವಿಠ್ಠಲ ಬದಿ ಸ್ಥೆರಿದಂತೆ ಪಕ್ಷದ ನೂರಾರು ಕಾರ್ಯಕರ್ತರು ಇದ್ದರು.

## ಗಾಜಾ । ಮಸೀದಿ ಮೇಲೆ ಇಸ್ರೇಲ್ ವೈಮಾನಿಕ ದಾಳಿ; ಕನಿಷ್ಠ 21 ಜನರು ಸಾವು

■ವಿಜಯಸಾಕ್ಷಿ ಸುದ್ದಿ, ಗಾಜಾ

ಮಧ್ಯ ಗಾಜಾ ಮೇಲೆ ಭಾನುವಾರ ಮುಂಜಾನೆ ಇಸ್ರೇಲ್ ನಡೆಸಿದ ವೈಮಾನಿಕ ದಾಳಿಯಲ್ಲಿ ಕನಿಷ್ಠ 21 ಜನರು ಸಾವನ್ನಪ್ಪಿದ್ದಾರೆ ಎಂದು ಪ್ಯಾಲೇಸ್ತೀನ್ ವೈದ್ಯಕೀಯ ಅಧಿಕಾರಿಗಳು ತಿಳಿಸಿದ್ದಾರೆ. ದೇರ್ ಅಲ್-ಬಲಾಹ್ ಪಟ್ಟಣದ ಅಲ್-ಅಕ್ಸಾ ಹುತಾತ್ಮರ ಆಸ್ಪತ್ರೆಯ ಬಳಿ ಸ್ಥಳಾಂತರಗೊಂಡ ನಿರಾಶ್ರಿತ ಜನರಿಗೆ ಆಶ್ರಯ ನೀಡುತ್ತಿರುವ ಮಸೀದಿಗೆ ದಾಳಿ ನಡೆಸಲಾಗಿದೆ ಎಂದು ಆಸ್ಪತ್ರೆ ಹೇಳಿಕೆಯಲ್ಲಿ ತಿಳಿಸಿದೆ.

"ಮಧ್ಯ ಗಾಜಾದ ಡೀರ್ ಅಲ್-ಬಲಾಹ್‌ನಲ್ಲಿರುವ ಅಲ್-ಅಕ್ಸಾ ಹುತಾತ್ಮರ ಆಸ್ಪತ್ರೆಯ ಗೇಟ್‌ನ ಮುಂದೆ ಸ್ಥಳಾಂತರಗೊಂಡ ಜನರಿಗೆ ಆಶ್ರಯ ನೀಡುವ ಮಸೀದಿಯ ಮೇಲೆ ಆಕ್ರಮಣಕಾರರಾದ ಇಸ್ರೇಲ್ ಬಾಂಬ್ ದಾಳಿ ನಡೆಸಿದೆ. ಪರಿಣಾಮವಾಗಿ ಸಾವಿನ ಸಂಖ್ಯೆ 21 ಕ್ಕೆ ಏರಿದ್ದು, ದೊಡ್ಡ ಸಂಖ್ಯೆಯಲ್ಲಿ ಜನರು ಗಾಯಗೊಂಡಿದ್ದಾರೆ" ಎಂದು ಏಜೆನ್ಸಿಯ ವಕ್ತಾರ ಮಹ್ಮದ್ ಬಾಸ್ಸಲ್ ಹೇಳಿದ್ದಾರೆ.

ಮಸೀದಿಯ ಕಮಾಂಡ್ ಮತ್ತು ಕಂಟ್ರೋಲ್ ಸೆಂಟರ್‌ನಲ್ಲಿ ಕಾರ್ಯನಿರ್ವಹಿಸುತ್ತಿದ್ದ ಹಮಾಸ್ ಬಂಡುಕೋರರ ಮೇಲೆ ನಿಖರವಾದ ದಾಳಿ ನಡೆಸಲಾಗಿದೆ ಎಂದು ಇಸ್ರೇಲಿ ಮಿಲಿಟರಿ ಹೇಳಿಕೆಯಲ್ಲಿ ತಿಳಿಸಿದೆ. ಇತ್ತೀಚಿನ ದಾಳಿ ಸೇರಿದಂತೆ ಇಸ್ರೇಲ್ ದಾಳಿಗೆ ಮೃತಪಟ್ಟ ಜನರ ಸಂಖ್ಯೆ 42,000ದ ಸಮೀಪಕ್ಕೆ ತಲುಪುತ್ತಿದೆ ಎಂದು ಪ್ಯಾಲೇಸ್ತೀನಿ ಆರೋಗ್ಯ ಸಚಿವಾಲಯ ಹೇಳಿದೆ. ಪ್ಯಾಲೇಸ್ತೀನಿ ನಿರಾಶ್ರಿತರು ಸೇರಿದಂತೆ ಲೆಬನಾನ್‌ನಲ್ಲಿ ಸಾವಿರಾರು ಜನರು ಯುದ್ಧ ಪೀಡಿತ ಪ್ರದೇಶದಿಂದ ಪಲಾಯನ ಮಾಡುವುದನ್ನು ಮುಂದುವರೆಸಿದ್ದಾರೆ. 2023ರ ಅಕ್ಟೋಬರ್ ವೇಳೆಗೆ ಪ್ರಾರಂಭವಾದ ಈ ಯುದ್ಧಕ್ಕೆ ವರ್ಷವಾಗುತ್ತಿದ್ದು, ಪ್ಯಾಲೆಸ್ತೀನ್ ಪರ ಪ್ರಪಂಚದಾದ್ಯಂತ ರ್ಯಾಲಿ ನಡಸಿ ಪ್ರತಿಭಟನೆ ನಡೆಸಲಾಗುತ್ತಿದೆ.

## ಶ್ರೀದೇವಿ ಪುರಾಣ ಆರಂಭ



■ವಿಜಯಸಾಕ್ಷಿ ಸುದ್ದಿ, ಲಕ್ಕುಂಡಿ

ನಮ್ಮೆಲ್ಲರ ಜೀವನ ಸಂಸ್ಕಾರಕ್ಕೆ ಹತ್ತಿರವಿರುವ ದೇವಿ ಪುರಾಣವನ್ನು ಆಲಿಸುವುದರ ಮೂಲಕ ಇದರಲ್ಲಿನ ತತ್ವಗಳನ್ನು ಅಳವಡಿಸಿಕೊಳ್ಳಬೇಕು ಎಂದು ಅಲ್ಲಮಪ್ರಭುದೇವರ ಮಠದ ಸಿದ್ಧಲಿಂಗೇಶ್ವರ ಸ್ವಾಮಿಗಳು ಹೇಳಿದರು.

ಇಲ್ಲಿಯ ಗ್ರಾಮ ದೇವತೆ ದೇವಸ್ಥಾನದಲ್ಲಿ ನವರಾತ್ರಿ ಅಂಗವಾಗಿ ಹಮ್ಮಿಕೊಂಡ 45ನೇ ವರ್ಷದ ದೇವಿ ಪುರಾಣ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿದ ಅವರು, ಈ ದ್ವಂದ್ವಾತೀತ ಬದುಕಿಗೆ ದೇವಿ ಪುರಾಣದಲ್ಲಿಯೇ ಆತ್ಮ ಸಾಕ್ಷಾತ್ಕಾರದ ನಿಯಮಗಳನ್ನು ಅಳವಡಿಸಿಕೊಳ್ಳಬೇಕಾಗಿದೆ ಎಂದರು.

ಗದಗ ಆಧ್ಯಾತ್ಮ ವಿದ್ಯಾಶ್ರಮದ ಮೈತ್ರಾದೇವಿ ಅವರು ಮೊದಲ ಅಧ್ಯಾಯದ ಪ್ರವಚನವನ್ನು ಪ್ರಾರಂಭಿಸಿ ದೇವಿಯ ನವ ಅವತಾರಗಳ ಕುರಿತು ವಿವರಿಸಿದರು. ಶಿಕ್ಷಕ ಶ್ರೀಕಾಂತ ಬಡಿಗೇರ ಪುರಾಣ ಪಠಣ ಮಾಡಿದರು. ಶಂಕ್ರಪ್ಪ ಬಣವಿ, ಮಲ್ಲಪ್ಪ ಕಲ್ಲೂರ, ಬಸನಗೌಡ ಪಾಟೀಲ ಸಂಗೀತ ಸೇವೆ ನೀಡಿದರು. ವಿರೂಪಾಕ್ಷಗೌಡ ಪಾಟೀಲ ಅಧ್ಯಕ್ಷತೆ ವಹಿಸಿದ್ದರು. ಗ್ರಾಮ ದೇವತಾ ಸೇವಾ ಸಮಿತಿಯ ಅಧ್ಯಕ್ಷ ಪ್ರಕಾಶ ಅರಹುಣಶಿ ಉಪಸ್ಥಿತರಿದ್ದರು. ಅನಸೂಯಾ ಭೂಮ್ಮಣವರ ಪ್ರಾರ್ಥಿಸಿದರು. ಅಶೋಕ ಬೂದಿಹಾಳ ಸ್ವಾಗತಿಸಿದರು. ಪ್ರಕಾಶ ಅಂಬಕ್ಕಿ ನಿರೂಪಿಸಿದರು. ಚಂದ್ರಶೇಖರ ಬಣವಿ ವಂದಿಸಿದರು.

## ಎಸ್‌ಎಸ್‌ಕೆ ವತಿಯಿಂದ ಸನ್ಮಾನ ಸ್ವೀಕರಿಸಿದ ರಾಜ್ಯಸಭಾ ಸದಸ್ಯ ನಾರಾಯಣಸಾ ಭಾಂಡಗೆ

# ಸಂಘಟಿತರಾಗಿ ಸಮಾಜವನ್ನು ಗಟ್ಟಿಗೊಳಿಸಿ

**■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ಎಸ್‌ಎಸ್‌ಕೆ ಸಮಾಜ ಚಿಕ್ಕ ಸಮಾಜವಾದರೂ ಎಲ್ಲರೊಂದಿಗೆ, ಇತರೆ ಸಮಾಜದವರೊಂದಿಗೆ ಉತ್ತಮ ಬಾಂಧವ್ಯ ಹೊಂದಿ ಜೀವನ ಸಾಗಿಸುತ್ತಿದ್ದಾರೆ. ಅದರ ಜೊತೆಗೆ ಸಮಾಜದ ಸಂಘಟನೆ ಮಾಡುತ್ತಾ ಸಮಾಜದ ಎಲ್ಲರೂ ಬೆಳೆಯುವದು ಅವಶ್ಯವಾಗಿದೆ ಎಂದು ರಾಜ್ಯಸಭಾ ಸದಸ್ಯ, ಬಾಗಲಕೋಟೆಯ ನಾರಾಯಣಸಾ ಭಾಂಡಗೆ ಅವರು ಹೇಳಿದರು.

ಅವರು ಪಟ್ಟಣದ ಶ್ರೀ ಅಂಭಾಭವಾನಿ ದೇವಸ್ಥಾನದಲ್ಲಿ ಎಸ್‌ಎಸ್‌ಕೆ ಸಮಾಜದ ವತಿಯಿಂದ ನವರಾತ್ರಿ ಅಂಗವಾಗಿ ಏರ್ಪಡಿಸಿದ್ದ ಕಾರ್ಯಕ್ರಮದಲ್ಲಿ ಭಾಗವಹಿಸಿ ಸಮಾಜದ ವತಿಯಿಂದ ನೀಡಿದ ಸನ್ಮಾನವನ್ನು ಸ್ವೀಕರಿಸಿ ಮಾತನಾಡಿದರು.



ಮಕ್ಕಳಿಗೆ ಉತ್ತಮ ಸಂಸ್ಕಾರ, ಸಂಪ್ರದಾಯಗಳನ್ನು ಕಲಿಸುವದ ಜೊತೆಗೆ ಸಮಾಜದ ಧಾರ್ಮಿಕ ಕಾರ್ಯಗಳಲ್ಲಿ ಮಕ್ಕಳು, ಯುವಕರು, ಯುವತಿಯರು ಹೆಚ್ಚಾಗಿ ಪಾಲ್ಗೊಳ್ಳುವಂತೆ ಮಾಡುವದು ಅವಶ್ಯವಾಗಿದೆ. ಎಸ್‌ಎಸ್‌ಕೆ ಸಮಾಜದವನಾಗಿ ರಾಜ್ಯಸಭಾ ಸದಸ್ಯನಾಗಿರುವದಕ್ಕೆ ದೇವಿಯ ಆಶೀರ್ವಾದ ಕಾರಣವಾಗಿದೆ.

ಮುಂದಿನ ದಿನಗಳಲ್ಲಿ ಸಮಾಜ ಸಂಘಟನೆಗೆ ಇನ್ನಷ್ಟು ಒತ್ತು ನೀಡಿ ಸರಕಾರದ ಸವಲತ್ತುಗಳನ್ನು ಕೊಡಿಸುವಲ್ಲಿ ಪ್ರಾಮಾಣಿಕ ಪ್ರಯತ್ನ ಮಾಡುತ್ತೇನೆ. ಎಲ್ಲರೂ ಸಂಘಟಿತರಾಗಿ ಸಮಾಜವನ್ನು ಗಟ್ಟಿಗೊಳಿಸಬೇಕು. ಮಕ್ಕಳಿಗೆ ಸಂಸ್ಕಾರ ಮನೆಯಿಂದಲೇ ಆರಂಭವಾಗಬೇಕು.

ಈ ನಿಟ್ಟಿನಲ್ಲಿ ಮಹಿಳೆಯರು ಹೆಚ್ಚು ಕಾರ್ಯ ಪ್ರವೃತ್ತರಾಗಬೇಕು ಎಂದು ಹೇಳಿದರು.

ಸಭೆಯ ಅಧ್ಯಕ್ಷತೆಯನ್ನು ಸಮಾಜದ ಅಧ್ಯಕ್ಷ ಪರಶುರಾಮಸಾ ಬದಿ ವಹಿಸಿ ಮಾತನಾಡಿದರು. ಕಾರ್ಯಕ್ರಮದಲ್ಲಿ ಎಸ್‌ಎಸ್‌ಕೆ ಪ್ರಾಂತೀಯ ಅಧ್ಯಕ್ಷ ಡಾ.ಶಶಿಕುಮಾರ ದಾನಿ, ಶಾಸಕ ಡಾ. ಚಂದ್ರು ಲಮಾಣಿ, ಉಪಾಧ್ಯಕ್ಷ ನಾರಾಯಣಸಾ ಪವಾರ, ಲಕ್ಷ್ಮಣಸಾ ರಾಜೋಳಿ, ತಿಪ್ಪಣ್ಣ ಬಾಕಳೆ, ಯಲ್ಲಪ್ಪ ಬದಿ, ಪರಶುರಾಮ ಬದಿ, ತುಕಾರಾಮ ಬದಿ, ಪಾಂಡುಸಾ ಬದಿ, ವಿಠ್ಠಲ್‌ಸಾ ಸಿದ್ಲಿಂಗ, ಛಾಯಪ್ಪ ಬದಿ, ಆನಂದಸಾ ಬದಿ, ಗಣಪತಸಾ ಪೂಜಾರಿ, ತರುಣ ಸಂಘದ ಅಧ್ಯಕ್ಷ ಭರತ ಬಾಕಳೆ, ಮಂಜುನಾಥ ಬದಿ, ಕಿರಣ ಬದಿ, ವಿನಾಯಕ ರಾಜೋಳಿ, ಗಣೇಶ ಬದಿ, ಆನಂದ ಹಬೀಬ ಸೇರಿದಂತೆ ಸಮಾಜದ ಅನೇಕ ಮುಖಂಡರು, ತರುಣ ಸಂಘದ ಸದಸ್ಯರು ಹಾಜರಿದ್ದರು.

# ದೇವತಾರಾಧನೆಯಿಂದ ನೆಮ್ಮದಿ ಪ್ರಾಪ್ತಿ



**■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ತಾಲೂಕಿನ ಕುಂದ್ರಳ್ಳಿ ಗ್ರಾಮದ ಗ್ರಾಮದೇವಿ ದೇವಸ್ಥಾನದಲ್ಲಿ ನವರಾತ್ರಿಯ ಅಂಗವಾಗಿ ಶ್ರೀದೇವಿಯ ಪುರಾಣ ಪ್ರವಚನ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದ್ದು, ಗುರುವಾರ ಹೂವಿನಶಿಗ್ಲಿ ವಿರಕ್ತಮಠದ ಚನ್ನವೀರ ಮಹಾಸ್ವಾಮಿಗಳ ಸಾನಿಧ್ಯದಲ್ಲಿ ಮಾಜಿ ಶಾಸಕ ರಾಮಕೃಷ್ಣ ದೊಡ್ಡಮನಿ ಕಾರ್ಯಕ್ರಮ ಉದ್ಘಾಟಿಸಿದರು.

ಈ ಸಂದರ್ಭದಲ್ಲಿ ಆಶೀರ್ವಚನ ನೀಡಿ ಮಾತನಾಡಿದ ಶ್ರೀಗಳು, ಧರ್ಮದಲ್ಲಿ ನವರಾತ್ರಿ ಹಬ್ಬಕ್ಕೆ ವಿಶೇಷ ಮಹತ್ವವಿದ್ದು, ಇದರಲ್ಲಿ ದೇವತೆಗೆ ಹೆಚ್ಚು ಪ್ರಾಶಸ್ತ್ಯವನ್ನು ನೀಡಲಾಗಿದೆ. ಪ್ರತಿಯೊಂದು ದೇವತೆಗೂ ವಿಶಿಷ್ಟವಾದ ಶಕ್ತಿಗಳಿದ್ದು, ಅವುಗಳ ಆರಾಧನೆಯಿಂದ ಶಾಂತಿ, ನೆಮ್ಮದಿ ಲಭಿಸುತ್ತದೆ. ಈ 9 ದಿನಗಳ ಕಾಲ ದೇವಿಯ ಆರಾಧನೆಯ ಜೊತೆಗೆ ಪುರಾಣ ಪಠಣ, ಪುರಾಣಗಳ ಶ್ರವಣ ಮಾಡುವದು ಹೆಚ್ಚು ಫಲದಾಯಕವಾಗಿರುತ್ತದೆ. ಈ ಹಬ್ಬದಲ್ಲಿ ಪುರಾಣ ಪ್ರವಚನಗಳನ್ನು ಸಂಘಟಿಸುವದರ ಜೊತೆಗೆ ಜನರು ಧಾರ್ಮಿಕ ವಿಚಾರಗಳಲ್ಲಿ ಪಾಲ್ಗೊಳ್ಳುವಂತೆ ಮಾಡುವ ಕಾರ್ಯಗಳು ನಡೆಯುತ್ತಿವೆ. ಬನ್ನಿಮಹಾಂಕಾಳಿಯನ್ನು ಪೂಜಿಸಿ ಉತ್ತಮ ಫಲಗಳನ್ನು ಪಡೆಯುವ ಈ ಪವಿತ್ರ ಹಬ್ಬದಲ್ಲಿ ಎಲ್ಲರೂ ಪಾಲ್ಗೊಳ್ಳಬೇಕೆಂದರು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಮಾಜಿ ಶಾಸಕ ರಾಮಣ್ಣ ಲಮಾಣಿ ವಹಿಸಿದ್ದರು. ಶ್ರೀ ಸಿದ್ಧರಾಮ ದೇವರು ನೇತೃತ್ವ ವಹಿಸಿದ್ದರು. ಇದೇ ಸಂದರ್ಭದಲ್ಲಿ ಲಿಂಗರಾಜಗೌಡ್ರ ಪಾಟೀಲ, ತ್ರಿಶಾ ಪಾಟೀಲ, ಜಂಗ್ಲಿಸಾಬ ನದಾಫ್ ಮುಂತಾದವರನ್ನು ಸನ್ಮಾನಿಸಲಾಯಿತು. ಸಭೆಯಲ್ಲಿ ಗ್ರಾ.ಪಂ ಅಧ್ಯಕ್ಷ, ಉಪಾಧ್ಯಕ್ಷರು ಸದಸ್ಯರು ಹಾಗೂ ಎಂ.ಡಿ. ಪಾಟೀಲ ಮುಂತಾದವರಿದ್ದರು. ಪಂಚಾಕ್ಷರಿಶಾಸ್ತ್ರೀಜಿ ಹಿರೇಮಠ, ಅನಿಲಕುಮಾರ ಮಠಪತಿ, ಮನೋಹರ ಗುಲಬರ್ಗ ಇವರು ಪುರಾಣ ಪ್ರವಚನ, ಸಂಗೀತ ಸೇವೆ ನೀಡಿದರು.

# ತರಬೇತಿಯ ಸದುಪಯೋಗ ಪಡೆಯಿರಿ

**■ವಿಜಯಸಾಕ್ಷಿ ಸುದ್ದಿ, ಮುಳಗುಂದ**

ಅಕ್ಟೋಬರ್ ರಜೆಯ ತರಬೇತಿಯನ್ನು ಮಕ್ಕಳು ಸದುಪಯೋಗಪಡಿಸಿಕೊಳ್ಳಬೇಕು ಎಂದು ಶಿಕ್ಷಕ ಪುಜಾರ ಹೇಳಿದರು.

ಅವರು ಪಟ್ಟಣದ ಸರಕಾರಿ ಪ್ರೌಢಶಾಲೆ(ಆರ್‌ಎಂಎಸ್)ಯಲ್ಲಿ ಎಸ್‌ಎಸ್‌ಎಲ್‌ಸಿ ಮಕ್ಕಳಿಗಾಗಿ ಆಯೋಜಿಸಿದ್ದ ವಿಶೇಷ ತರಬೇತಿಯನ್ನು ಉದ್ಘಾಟಿಸಿ ಮಾತನಾಡಿದರು.


ಎಸ್‌ಎಸ್‌ಎಲ್‌ಸಿ ಪರೀಕ್ಷೆ ಮಕ್ಕಳಿಗೆ ಉತ್ತಮವಾದ ಮೈಲುಗಲ್ಲು. ಈ ಮೈಲುಗಲ್ಲನ್ನು ಯಾವುದೇ ಭಯವಿಲ್ಲದೆ, ಶ್ರದ್ಧೆಯಿಂದ, ಸತತ ಪರಿಶ್ರಮದಿಂದ ನಿತ್ಯ ಗುರುಗಳು ಹಾಕಿಕೊಟ್ಟ ಮಾರ್ಗದಲ್ಲಿ ಸಾಗುವುದರಿಂದ



ಮಕ್ಕಳ ಶೈಕ್ಷಣಿಕವಾಗಿ ಅಭಿವೃದ್ಧಿ ಹೊಂದಲು ಸಾಧ್ಯವಾಗುತ್ತದೆ. ಡಿಪಿಇಪಿ ಶಾಲೆಯ ಅಧ್ಯಕ್ಷ ಮಾಹಾಂತೇಶ ಕೆಂಚನಾಯ್ಕರ ತಮ್ಮ ತನು, ಮನ, ಧನದಿಂದ ಸಹಾಯ ಸಹಕಾರದಿಂದ ಮಕ್ಕಳ ಏಳ್ಗೆಗಾಗಿ ಶ್ರಮಿಸಿದವರು. ಇಂತಹ ಶಿಕ್ಷಣ ಪ್ರೇಮಿಗಳು ಸಮಾಜಕ್ಕೆ ಮಾದರಿಯಾಗಿದ್ದಾರೆ ಎಂದರು.

ಬಸವರಾಜ ಗೌರಿಮನಿ, ಮಹೇಶ ಕೊಂಡಿಕೊಪ್ಪ, ಇಸ್ಮಾಯಿಲ್ ಮುಜಾವಾರ, ಶರಣಬಸವ ಪೂಜಾರ, ಜಿ.ಎಂ. ಪಿರಂಗಿ, ಪಿ.ಸಿ. ಪಾಟೀಲ್. ಆರೀಫ್ ಶಿರಹಟ್ಟಿ, ಮಾಹಾಂತೇಶ ಮಾನೇಗಾರ, ಮಾಹಾಂತೇಶ ಕೆಂಚನಾಯ್ಕರ್ ಮುಂತಾದವರಿದ್ದರು.

# ದೇವಿ ಪುರಾಣ ದೇಹದ ಪುರಾಣ



**■ವಿಜಯಸಾಕ್ಷಿ ಸುದ್ದಿ, ಮುಳಗುಂದ**

ದೇವಿ ಪುರಾಣ ನಮ್ಮ ದೇಹದ ಪುರಾಣವಾಗಿದೆ ಎಂದು ಗೌರಮ್ಮಾ ಬಡ್ನಿ ಹೇಳಿದರು. ಅವರು ಪಟ್ಟಣದ ಹಳೆಹುಡದ ಗ್ರಾಮದೇವತೆ ದೇವಸ್ಥಾನದಲ್ಲಿ ನವರಾತ್ರಿ ಅಂಗವಾಗಿ ಜರುಗಿದ ದೇವಿ ಪುರಾಣ ಉದ್ಘಾಟಿಸಿ ಮಾತನಾಡಿ, ನಮ್ಮಲ್ಲಿರುವ ದುಷ್ಟಶಕ್ತಿಗಳನ್ನು ದೇವಿ ಪುರಾಣ ಪ್ರವಚನ ಕೇಳುವುದರಿಂದ ಅಳಿಸಬಹುದು ಎಂದರು.

ಪುರಾಣವನ್ನು ಪಂಚಾಕ್ಷರಯ್ಯ ಮರಿದೇವರಮಠ, ಪುರಾಣ ಪಠಣವನ್ನು ಕಾಶೀನಾಥ ಮರಿದೇವರಮಠ, ಸಂಗೀತ ಶಂಕ್ರಪ್ಪ ಮಡ್ಡಿ, ತಬಲಾ ಮಾಹಾಂತೇಶ ಬಳ್ಳಾರಿ, ನೆರವೇರಿಸಿದರು. ಎಸ್.ಸಿ. ಬಡ್ನಿ, ಅಶೋಕ ಸೋನಗೋಜಿ, ಚನ್ನಪ್ಪ ಕರಿಗೂಳಪ್ಪನವರ, ಬಸವರಾಜ ಹಾರೋಗೇರಿ, ಕೆ.ಎಸ್. ಮಳ್ಳಿ, ಹರ್ಷಲತಾ ದೇಶಪಾಂಡೆ, ಶೋಭಾ ಪಾಟೀಲ್ ಇದ್ದರು.

# ಶ್ರೀ ದೇವಿ ಪುರಾಣ ಪ್ರಾರಂಭ

**■ವಿಜಯಸಾಕ್ಷಿ ಸುದ್ದಿ, ಲಕ್ಕುಂಡಿ**

ಮನುಷ್ಯನಲ್ಲಿಯ ಅರಿಷಡ್ವರ್ಗಗಳನ್ನು ನಿರ್ಮೂಲನೆ ಮಾಡಿಕೊಳ್ಳಲು ಸಹಕಾರಿಯಾಗುವ ದೇವಿ ಪುರಾಣದ ತತ್ವೋಪದೇಶಗಳನ್ನು ಜೀವನದಲ್ಲಿ ಅಳವಡಿಸಿಕೊಳ್ಳಬೇಕು ಎಂದು ಶಂಕ್ರಯ್ಯಶಾಸ್ತ್ರೀಗಳು ಹಿರೇಮಠ ಸಲಹೆ ನೀಡಿದರು.

ಇಲ್ಲಿಯ ದಂಡಿನ ದುರ್ಗಾದೇವಿ ದೇವಸ್ಥಾನದಲ್ಲಿ ವಿಜಯದಶಮಿಯಂಗವಾಗಿ ಹಮ್ಮಿಕೊಂಡ 24ನೇ ವರ್ಷದ ದೇವಿ ಪುರಾಣ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ಅವರು, ಇದು ದೇವಿ ಹೆಸರಲ್ಲಿ ನಡೆಯುವ ಪುರಾಣವಾದರೂ ಸಹ ನಮ್ಮ ದೇಹದ ಪುರಾಣವಾಗಿದೆ. ದೇವಿಯು ನಮ್ಮ ಬದುಕಿನಲ್ಲಿ ಕಷ್ಟ-ನಷ್ಟ,



ಸುಖಗಳನ್ನು ನೀಡಿದ್ದಾಳೆ. ಆದರೆ ಅವು ಯಾವುದೂ ಶಾಶ್ವತವಲ್ಲ. ಕೇವಲ ಪಾತ್ರಗಳಷ್ಟೇ ಆಗಿವೆ. ಅವೆಲ್ಲವೂ ನಮ್ಮ ಒಳ್ಳೆಯದಕ್ಕಾಗಿದೆ ಎಂಬ ಭಾವನೆಯಲ್ಲಿ ಬದುಕಬೇಕು ಎಂದು ವಿವರಿಸಿದರು.

ದೇವಿ ಪುರಾಣ ಪ್ರವಚನವನ್ನು ಆರಂಭಿಸಿದ ಕೊಟ್ರಯ್ಯಶಾಸ್ತ್ರಿಗಳು ನರಗುಂದಮಠ ಅವರು ಮಾತನಾಡಿ, ಅಜ್ಞಾನದ ಕತ್ತಲೆಯನ್ನು ಕಳೆದು ಸುಜ್ಞಾನದ ಬೆಳಕು ಮೂಡಲು ಚಿದಾನಂದ ಅವಧೂತರು ರಚಿಸಿದ ಪುರಾಣ ಗಂಥ್ರವು ಸಹಕಾರಿಯಾಗಿದೆ. ಈ ಪುರಾಣವನ್ನು ಪ್ರತಿನಿತ್ಯ ಪಾರಾಯಣ ಮಾಡುವದರಿಂದ ಶಾಂಭವಿ ಅವತಾರಗಳ ಸಾಕ್ಷಾತ್ಕಾರವಾಗುತ್ತದೆ ಎಂದು ವಿವರಿಸಿದರು.

ಅಂದಪ್ಪ ಮೆಣಸಿನಕಾಯಿ ಅವರು ಪುರಾಣ ಪಠಣ ಅರಂಭಿಸಿದರು. ಮಂಜುನಾಥ ಗರ್ಜಪ್ಪನವರ, ಈರಪ್ಪ ಕರಿಯಲ್ಲಪ್ಪನವರ ಸಂಗೀತ ಸೇವೆ ನೀಡಿದರು. ಗ್ರಾ.ಪಂ ಉಪಾಧ್ಯಕ್ಷೆ ಪುಷ್ಪಾ ಪಾಟೀಲ, ತಾ.ಪಂ ಮಾಜಿ ಸದಸ್ಯ ಮಹೇಶ ಮುಸ್ಕಿನಭಾವಿ, ತಾ.ಪಂ ಮಾಜಿ ಅಧ್ಯಕ್ಷ ಎಂ.ಎನ್. ಉಮಚಗಿ, ಪುರಾಣ ಸಮಿತಿಯ ಅಧ್ಯಕ್ಷ ರುದ್ರಪ್ಪ ಮುಸ್ಕಿನಭಾವಿ, ಗ್ರಾ.ಪಂ ಸದಸ್ಯ ವಿರುಪಾಕ್ಷಪ್ಪ ಬೆಟಗೇರಿ, ವೀರಯ್ಯ ಗಂಧದ, ಶಿವಪ್ಪ ಸಜ್ಜನರ, ಪ್ರೇಮಾ ಮಟ್ಟಿ, ನೀಲವ್ವ ವಡ್ಡರ, ಶರಣಯ್ಯ ಪತ್ರಿಮಠ ಉಪಸ್ಥಿತರಿದ್ದರು. ನಜೀರಅಹ್ಮದ ಕಿರಿಟಗೇರಿ ನಿರೂಪಿಸಿ ವಂದಿಸಿದರು.

# ಪುರಾಣವನ್ನು ಪ್ರತಿಯೊಬ್ಬರೂ ಆಲಿಸಬೇಕು



**■ವಿಜಯಸಾಕ್ಷಿ ಸುದ್ದಿ, ಮುಳಗುಂದ**

ದೇವಿ ಪುರಾಣ ಆಲಿಸುವುದರಿಂದ ದೈಹಿಕ ಹಾಗೂ ಮಾನಸಿಕ ನೆಮ್ಮದಿ ವೃದ್ಧಿಯಾಗುತ್ತದೆ ಎಂದು ಶಿವಲೀಲಾ ಅಕ್ಕಿ ಅಭಿಪ್ರಾಯಪಟ್ಟರು.


ಅವರು ಪಟ್ಟಣದ ರೇಣುಕಾ ಯಲ್ಲಮ್ಮ ದೇವಸ್ಥಾನದಲ್ಲಿ ನವರಾತ್ರಿ ಅಂಗವಾಗಿ ಜರುಗಿದ ದೇವಿ ಪುರಾಣ ಉದ್ಘಾಟಿಸಿ ಮಾತನಾಡಿ, ನಮ್ಮಲ್ಲಿರುವ ಕಾಮ, ಕ್ರೋಧ, ಲೋಭ, ಮೋಹ, ಮದ, ಮತ್ಸರಗಳೆಂಬ ಅರಿಷಡ್ವರ್ಗಗಳನ್ನು ಗೆಲ್ಲುವ ವಿಧಾನಗಳನ್ನು ದೇವಿ ಪುರಾಣದಲ್ಲಿ ಅತ್ಯಂತ ಅರ್ಥಗರ್ಭಿತವಾಗಿ ವಿವರಿಸಲಾಗಿದೆ. ಇಂತಹ ದೇವಿ ಪುರಾಣವನ್ನು ಪ್ರತಿಯೊಬ್ಬರೂ ಆಲಿಸಬೇಕು ಎಂದರು.

ಸಿದ್ದಣ್ಣಾ ಜವಳಿ ಪುರಾಣ ಪ್ರವಚನ ನೀಡಿದರು, ಶಿವಯ್ಯ ಮರಿದೇವರಮಠ ಪುರಾಣ ಪಠಣ ಮಾಡಿದರು, ತಬಲಾ ವೆಂಕಟೇಶ, ಸಂಗೀತ ಮೋಹನ ಮದ್ದಿನ ಇವರಿಂದ ಜರುಗಿತು.

ಗೌರಮ್ಮಾ ಬಡ್ನಿ, ಎಸ್.ಸಿ. ಬಡ್ನಿ, ವಿಜಯ ನೀಲಗುಂದ, ಬಸವರಾಜ ಹಾರೋಗೇರಿ, ಜಗದೀಶ ಬಟ್ಟೂರ, ಹರ್ಷಲತಾ ದೇಶಪಾಂಡೆ, ಶೋಭಾ ಪಾಟೀಲ್, ಕವಿತಾ ದೊಟಿಕಲ್, ಧರ್ಮಸ್ಥಳ ಗ್ರಾಮಾಭಿವೃದ್ಧಿ ಸಂಘದ ಮೇಲ್ವಿಚಾರಕಿ ಶಾಂತಾ, ಅಕ್ಕಮ್ಮಾ ನೀಲಗುಂದ, ಯೋಗ ಶಿಕ್ಷಕ ಪ್ರಕಾಶ ಮದ್ದಿನ ಇದ್ದರು.



ದಸರಾ ಹಬ್ಬದ ನಾಲ್ಕನೇ ದಿನದಂದು ಗದಗನ ತೇಜಾನಗರದ ಅಂಗಡಿ ಸಹೋದರಿಯರ ಹಾಗೂ ಸ್ಥಳಿಯ ಮಹಿಳೆಯರು ಕೇಶರಿಮಯವಾಗಿದ್ದು ಹೀಗೆ...



ರಾಜ್ಯದ ಗೃಹ ಸಚಿವರಾದ ಡಾ. ಜಿ.ಪರಮೇಶ್ವರ ಅವರು ಗದಗ ನಗರಕ್ಕೆ ಆಗಮಿಸಿದ ಸಂದರ್ಭದಲ್ಲಿ ಕೆ.ಡಿ.ಪಿ. ಸಮಿತಿಯ ಸದಸ್ಯರಾದ ಎಸ್.ಎನ್. ಬಳ್ಳಾರಿ ಅವರು ಸ್ವಾಗತಿಸಿದರು. ಈ ಸಂದರ್ಭದಲ್ಲಿ ಹರೀಶ್ ಭಾವಿಮನಿ ಮುಂತಾದವರು ಹಾಜರಿದ್ದರು.




ಗದಗ ನಗರದ ವಿದ್ಯಾದಾನ ಸಮಿತಿಯ ಕ್ಲಾಸಿಕ್ ಆಂಗ್ಲ ಮಾಧ್ಯಮ ಶಾಲೆಯಲ್ಲಿ 'ಉದಯವಾಗಲಿ ನಮ್ಮ ಚೆಲುವ ಕನ್ನಡ ನಾಡು' ನಾಡಗೀತೆಯನ್ನು ಬರೆದ ಹಾಗೂ ವಿದ್ಯಾದಾನ ಸಮಿತಿಯ ಸಂಸ್ಥಾಪಕರಾದ ಹುಯಿಲಗೋಳ ನಾರಾಯಣರಾಯರ ಜಯಂತಿಯನ್ನು ಆಚರಿಸಲಾಯಿತು. ಈ ಸಂದರ್ಭದಲ್ಲಿ ಶಾಲೆಯ ಹಿರಿಯ ಶಿಕ್ಷಕಿ ರೇಣುಕಾ ವೆಂಕಟಾಪುರ, ಶಾಲೆಯ ಸಮಸ್ತ ಶಿಕ್ಷಕ ವೃಂದ ಹಾಗೂ ಸಿಬ್ಬಂದಿ ವರ್ಗದವರು ಇದ್ದರು.

## ಸಂಗೀತಾ ಕಲಾಲರಿಗೆ ಪಿಎಚ್‌ಡಿ



■ವಿಜಯಸಾಕ್ಷಿ ಸುದ್ದಿ, ಗದಗ

ಹುಲಕೋಟಿಯ ಕೆ.ಎಚ್. ಪಾಟೀಲ್ ಸರ್ಕಾರಿ ಪ್ರಥಮದರ್ಜೆ ಮಹಾವಿದ್ಯಾಲಯದಲ್ಲಿ ಗಣಿತಶಾಸ್ತ್ರ ವಿಭಾಗದ ಸಹಾಯಕ ಪ್ರಾಧ್ಯಾಪಕರಾಗಿ ಸೇವೆ ಸಲ್ಲಿಸುತ್ತಿರುವ ಸಂಗೀತಾ ಪ್ರಕಾಶ ಕಲಾಲ ಅವರು ವಿಜಯನಗರ ಶ್ರೀಕೃಷ್ಣದೇವರಾಯ ವಿಶ್ವವಿದ್ಯಾಲಯದ ಹಿರಿಯ ಪ್ರಾಧ್ಯಾಪಕರಾಗಿರುವ ಡಾ.ಹನಮೇಶ ವೈದ್ಯ ಅವರ ಮಾರ್ಗದರ್ಶನದಲ್ಲಿ 'ಕಂಪ್ಯೂಟೇಶನ್ ಅನಾಲಿಸಿಸ್ ಆಫ್ ಹೀಟ್ ಆಂಡ್ ಮಾಸ್ ಟ್ರಾನ್ಸಫರ್ ಆಫ್ ನ್ಯಾನೋಫ್ಲೂಡ್ಸ್' ವಿಷಯದ ಕುರಿತು ಮಂಡಿಸಿದ ಸಂಶೋಧನಾ ಪ್ರಭಂದಕ್ಕೆ ಬಳ್ಳಾರಿಯ ವಿಜಯನಗರ ಶ್ರೀಕೃಷ್ಣದೇವರಾಯ ವಿಶ್ವವಿದ್ಯಾಲಯ ಪಿಎಚ್‌ಡಿ ಪದವಿ ಪ್ರದಾನ ಮಾಡಿದೆ.

ಸಂಗೀತಾ ಅವರಿಗೆ ಪ್ರಾಚಾರ್ಯರಾದ ಡಾ. ಶಿವಪ್ಪ ಕುರಿ, ಡಾ. ಸುಧಾ ಕೌಜಗಿರಿ, ಡಾ. ಉಲ್ಲಾಸ ಶೆಟ್ಟಿ, ಡಾ. ಅಪ್ಪಣ್ಣಾ ಹಂಜೆ, ಡಾ. ಲಕ್ಷ್ಮಣ ಮುಳಗುಂದ, ಸಹಾಯಕ ಪ್ರಾಧ್ಯಾಪಕರಾದ ಮಹಾನಂದಾ ಹಿರೇಮಠ, ಶ್ವೇತಾ ಪಾಲನಕರ, ಗುರು-ಹಿರಿಯರು, ಕುಟುಂಬ ವರ್ಗ, ಕಾಲೇಜಿನ ಎಲ್ಲಾ ಬೋಧಕ ಹಾಗೂ ಬೋಧಕೇತರ ಸಿಬ್ಬಂದಿ ವರ್ಗದವರು ಅಭಿನಂದಿಸಿದ್ದಾರೆ.

## ಮನೋರಮಾ ಪ.ಪೂ ಕಾಲೇಜಿನಲ್ಲಿ ಪಾಲಕರ ಸಭೆ



■ವಿಜಯಸಾಕ್ಷಿ ಸುದ್ದಿ, ಗದಗ

ನಗರದ ಮನೋರಮಾ ಪದವಿಪೂರ್ವ ಕಾಲೇಜಿನಲ್ಲಿ ಪಾಲಕರ ಸಭೆ ಆಯೋಜಿಸಲಾಗಿತ್ತು. ಸಭೆಯ ಅಧ್ಯಕ್ಷತೆಯನ್ನು ಪ್ರಾಚಾರ್ಯ ಬಿ.ಎಸ್. ಹಿರೇಮಠ ವಹಿಸಿ ಮಾತನಾಡಿ, ಎಲ್ಲ ಪಾಲಕರು ತಮ್ಮ ಮಕ್ಕಳ ಶೈಕ್ಷಣಿಕ ಅಭಿವೃದ್ಧಿಗೆ ಒತ್ತು ನೀಡಿ ಮಕ್ಕಳ ಚಲನವಲನಗಳ ಬಗ್ಗೆ ಗಮನ ಕೊಡಿ. ಮಕ್ಕಳಿಗೆ ಮೊಬೈಲ್ ಬಳಕೆ ಮಾಡಲು ಮಹಾವಿದ್ಯಾಲಯದಲ್ಲಿ ಅವಕಾಶವಿರುವುದಿಲ್ಲ. ಕಾಲೇಜಿನ ನಿಯಮಾವಳಿಗಳನ್ನು ಮೀರುವಂತಿಲ್ಲ. ನಿಮ್ಮ ಮಕ್ಕಳ ಘಟಕ ಪರೀಕ್ಷೆಗಳ ಫಲಿತಾಂಶವನ್ನು ವಿಕ್ಷೀಸಿ ಮುಂದಿನ ಪರೀಕ್ಷೆಗಳಲ್ಲಿ ಹೆಚ್ಚು ಅಂಕ ಬರುವ ರೀತಿಯಲ್ಲಿ ಅಧ್ಯಯನ ಮಾಡಿಸಿ. ಪಾಲಕರೆಲ್ಲರೂ ಸಹಕರಿಸಬೇಕೆಂದರು.

ಆಡಳಿತಾಧಿಕಾರಿ ಕಿಶೋರ ಮುದಗಲ್ಲ ಮಾತನಾಡಿ, ವಿದ್ಯಾರ್ಥಿಗಳು ಸಾಧನೆಯತ್ತ ಸಾಗಬೇಕಾದರೆ ಮುಂದೆ ಗುರಿ ಇರಬೇಕು ಹಿಂದೆ ಗುರು ಇರಬೇಕು ಎಂಬಂತೆ ತಮ್ಮೆಲ್ಲರಿಗೆ ಉಪನ್ಯಾಸಕ ಸಿಬ್ಬಂದಿಯವರು ಹಾಗೂ ಪ್ರಾಚಾರ್ಯರು ದಾರಿದೀಪವಾಗಿ ಕಾರ್ಯನಿರ್ವಹಿಸುತ್ತಾರೆ. ತಾವೆಲ್ಲ ಗುರು-ಹಿರಿಯರನ್ನು ಗೌರವಸಿ ಸಾಧನೆಯತ್ತ ಸಾಗಿರಿ ಎಂದರು.

ಸಂಯೋಜಕಿ ಪ್ರೊ. ಶಾಹೀದಾ ಶಿರಹಟ್ಟಿಯವರು ವಿದ್ಯಾರ್ಥಿಗಳ ಘಟಕ ಪರೀಕ್ಷೆಗಳ ಫಲಿತಾಂಶವನ್ನು ಪಾಲಕರಿಗೆ ವಿವರಿಸಿದರು. ಪ್ರೊ. ರಾಘವೇಂದ್ರ ನವಲಗುಂದ, ಪ್ರೊ. ಶ್ರೀಕಾಂತ ಐಲಿ, ಪ್ರೊ. ರಶ್ಮಿ ಹೂಗಾರ, ಪ್ರೊ. ಸುಜಾತಾ ಇಂಡಿ, ಪ್ರೊ. ಕೆ. ಜಾಧವ, ಪ್ರೊ. ಒ.ಒ. ಶಿರಹಟ್ಟಿ ಉಪಸ್ಥಿತರಿದ್ದರು.

### ಗದಗ ಎಸ್‌ಎಸ್‌ಕೆ ಸಮಾಜದ 'ನಮ್ಮೂರು ದಸರಾ-2024' ಕಾರ್ಯಕ್ರಮದಲ್ಲಿ ಸಚಿವ ಎಚ್.ಕೆ. ಪಾಟೀಲ

# ಉತ್ತಮ ಮಳೆ-ಬೆಳೆಯಿಂದ ಹಬ್ಬಕ್ಕೆ ಕಳೆ

■ವಿಜಯಸಾಕ್ಷಿ ಸುದ್ದಿ, ಗದಗ

ಈ ಬಾರಿ ನಾಡಿನಲ್ಲಿ ಉತ್ತಮ ಮಳೆಯಿಂದಾಗಿ ಎಲ್ಲ ಜಲಾಶಯಗಳು ತುಂಬಿದ್ದು, ಜನತೆ ಸುಖ, ಶಾಂತಿ, ನೆಮ್ಮದಿಯೊಂದಿಗೆ ದಸರಾ ಹಬ್ಬವನ್ನು ಸಂತಸ-ಸಂಭ್ರಮದಿಂದ ಆಚರಿಸುತ್ತಿದ್ದಾರೆ ಎಂದು ಗದಗ ಜಿಲ್ಲಾ ಉಸ್ತುವಾರಿ ಸಚಿವ ಡಾ. ಎಚ್.ಕೆ. ಪಾಟೀಲ ಅಭಿಪ್ರಾಯಪಟ್ಟರು.

ನಗರದ ಹಳೇ ಸರಾಫ್ ಬಜಾರದ ಶ್ರೀ ಜಗದಂಬಾ ದೇವಸ್ಥಾನದ ಸಹಸ್ರಾರ್ಜುನ ಸಮುದಾಯ ಭವನದ ಬಾಸ್ಕರಸಾ ಪವಾರ ಸಭಾಂಗಣದ ದಸರಾ ದರಬಾರ ವೇದಿಕೆಯಲ್ಲಿ ಜರುಗಿದ 'ನಮ್ಮೂರು ದಸರಾ-2024' ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಗಳಾಗಿ ಪಾಲ್ಗೊಂಡು ಅವರು ಮಾತನಾಡಿದರು.

ಇದೇ ಸಂದರ್ಭದಲ್ಲಿ ಎಸ್.ಎಸ್.ಕೆ ಸಮಾಜದ ಸಮಗ್ರ ಜನಗಣತಿ-2024ಕ್ಕೆ ಚಾಲನೆ ನೀಡಿದರು. ಇದಕ್ಕೂ ಮುನ್ನ ಅವರು ಜಗದಂಬಾ ದೇವಿ ಹಾಗೂ ತುಳಜಾಭವಾನಿ ದೇವಿಯ ದರ್ಶನ ಪಡೆದರು.

ಯುವ ಮುಖಂಡ ಕೃಷ್ಣಗೌಡ ಎಚ್.ಪಾಟೀಲ ಮಾತನಾಡಿ, ಪ್ರತಿ ವರ್ಷ ದಸರಾ ಹಬ್ಬವನ್ನು ಎಸ್.ಎಸ್.ಕೆ ಸಮಾಜ ಬಾಂಧವರು ಅತ್ಯಂತ ಅದ್ದೂರಿಯಾಗಿ ಗದಗ ನಗರದಲ್ಲಿ ಆಚರಿಸುತ್ತಾ ಬರುತ್ತಿದ್ದಾರೆ. ಒಳ್ಳೆಯ ಕೆಲಸಕ್ಕೆ ಪ್ರಾಮುಖ್ಯತೆ ನೀಡುವ ಮೂಲಕ ಜೀವನವನ್ನು ಪಾವನಗೊಳಿಸುಂತೆ ದೇವಿಯಲ್ಲಿ ಪ್ರಾರ್ಥನೆ ಮಾಡುವ ಹಬ್ಬ ಇದಾಗಿದೆ. ಎಸ್.ಎಸ್.ಕೆ ಸಮಾಜವು ಈ ಹಿಂದೆ ನಮ್ಮ ಅಜ್ಜನವರಾದ ದಿ. ಕೆ.ಎಚ್. ಪಾಟೀಲ, ದೊಡ್ಡಪ್ಪನವರಾದ ಡಿ.ಆರ್. ಪಾಟೀಲ ಹಾಗೂ ತಂದೆಯವರಾದ ಡಾ. ಎಚ್.ಕೆ. ಪಾಟೀಲ ಅವರಿಗೆ ಪ್ರೋತ್ಸಾಹ ನೀಡಿದಂತೆ ನನಗೂ ಸಹ ಗೌರವಾದರಗಳೊಂದಿಗೆ ಪ್ರೋತ್ಸಾಹ ನೀಡುತ್ತಿರುವುದು ನಮ್ಮ ಕುಟುಂಬಕ್ಕೆ ಹೆಮ್ಮೆಯ ವಿಷಯವಾಗಿದೆ ಎಂದರು.



ಉತ್ತಮ ಮಳೆಯಿಂದಾಗಿ ರೈತರ ಬೆಳೆ ಚೆನ್ನಾಗಿದೆ. ಈ ಬಾರಿ ಅತ್ಯಂತ ಕ್ಷೇಮವಾದ ವರ್ಷವಾಗಿರುವದರಿಂದ ಎಲ್ಲರ ಬದಕು ಹಸನಾಗಿದೆ. ಇದೇ ರೀತಿ ತಾಯಿ ಜಗದಂಬಾ ದೇವಿ ಎಲ್ಲರಿಗೂ ಸುಖ-ಶಾಂತಿ ನೀಡಲಿ ಎಂದು ಎಸ್.ಎಸ್.ಕೆ. ಸಮಾಜ ಬಾಂಧವರಿಗೆ ಸಚಿವ ಎಚ್.ಕೆ. ಪಾಟೀಲ ಶುಭ ಹಾರೈಸಿದರು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಗದಗ ಎಸ್.ಎಸ್.ಕೆ ಸಮಾಜ ಪಂಚ ಕಮಿಟಿ ಅಧ್ಯಕ್ಷ ಫಕೀರಸಾ ಬಾಂಡಗೆ ವಹಿಸಿದ್ದರು. ಎಸ್.ಎಸ್.ಕೆ ಸಮಾಜದ ಗೌರವ ಕಾರ್ಯದರ್ಶಿ ವಿನೋದ ಶಿದ್ಲಿಂಗ ಪ್ರಾಸ್ತಾವಿಕವಾಗಿ ಮಾತನಾಡಿದರು. ವೇದಿಕೆ ಮೇಲೆ ಪಂಚ ಕಮಿಟಿಯ ಉಪಾಧ್ಯಕ್ಷ ರಾಜು ಬದಿ, ರವಿ ಶಿದ್ಲಿಂಗ, ದಸರಾ ಕಮಿಟಿಯ ಚೇರಮನ್ ವಿಷ್ಣುಸಾ ಶಿದ್ಲಿಂಗ ಉಪಸ್ಥಿತರಿದ್ದರು.

ಈ ಸಂದರ್ಭದಲ್ಲಿ ಪಂಚ ಕಮಿಟಿಯ ಸದಸ್ಯರಾದ, ವಿಶ್ವನಾಥಸಾ ಖಟವಟೆ, ಸುರೇಶಕುಮಾರ ಬದಿ, ಬಲರಾಮ ಬಸವಾ, ಮಾರುತಿ ಪವಾರ, ಶ್ರೀನಿವಾಸ ಬಾಂಡಗೆ, ಪರಶುರಾಮಸಾ ಬದಿ, ಗಣಪತಸಾ ಜಿತೂರಿ, ವಿನೋದ ಬಾಂಡಗೆ, ಪ್ರಕಾಶ ಬಾಕಳೆ, ಗಂಗಾಧರ ಹಬೀಬ, ಅನಿಲ್ ಖಟವಟೆ, ಅಂಬಾಸಾ ಖಟವಟೆ, ಸಮಾಜದ ಮಾಜಿ ಅಧ್ಯಕ್ಷ ಪ್ರಭು ಬುರಬುರೆ, ವಿಶ್ವನಾಥ ಸೂಳಂಕಿ, ಸಾಗರ ಪವಾರ, ಸತೀಶ ದೇವಳೆ, ಶ್ರೀಕಾಂತ ಬಾಕಳೆ, ಮೋಹನಸಾ ಪವಾರ, ನಾಗರಾಜ ಖೋಡೆ, ಮಾಧು ಬದಿ, ಉಮಾಬಾಯಿ ಬೇವಿನಕಟ್ಟಿ, ಸ್ನೇಹಲತಾ ಕಬಾಡಿ ಸೇರಿದಂತೆ ಮುಂತಾದವರು ಉಪಸ್ಥಿತರಿದ್ದರು.

ಎನ್.ಆರ್.ಖಟವಟೆ ಸ್ವಾಗತಿಸಿದರು. ಜಿ.ಎನ್. ಹಬೀಬ ನಿರೂಪಿಸಿದರು. ಮೋತಿಲಾಲಸಾ ಪೂಜಾರಿ ವಂದಿಸಿದರು.

### ರಾಷ್ಟ್ರೀಯ ವಿಧಿ ವಿಜ್ಞಾನ ಸಂಸ್ಥೆಗೆ ಗೃಹ ಸಚಿವ ಪರಮೇಶ್ವರ ಭೇಟಿ

# ಸೈಬರ್ ಅಪರಾಧ ತಡೆಗೆ ಅಗತ್ಯ ತರಬೇತಿ

■ವಿಜಯಸಾಕ್ಷಿ ಸುದ್ದಿ, ಧಾರವಾಡ

ಹೆಚ್ಚುತ್ತಿರುವ ಸೈಬರ್ ಅಪರಾಧಗಳನ್ನು ತಡೆಗಟ್ಟಲು ಈಗಾಗಲೇ ಅಸ್ತಿತ್ವದಲ್ಲಿರುವ ಸೆನ್ ಠಾಣೆ (ಅಇಓ) ಠಾಣೆಗಳಿಗೆ ಎಸ್.ಪಿ. ರ್‍ಯಾಂಕ್‌ನ ಅಧಿಕಾರಿಗಳನ್ನು ನೇಮಿಸಲಾಗುವುದೆಂದು ಗೃಹ ಸಚಿವ ಜಿ. ಪರಮೇಶ್ವರ ತಿಳಿಸಿದರು.

ರಾಷ್ಟ್ರೀಯ ವಿಧಿ ವಿಜ್ಞಾನ ಸಂಸ್ಥೆಯ ವಿವಿಧ ವಿಭಾಗಗಳಿಗೆ ಹಾಗೂ ಪ್ರಯೋಗಾಲಯಗಳಿಗೆ ಶನಿವಾರ ಭೇಟಿ ನಂತರ ಅವರು ಸುದ್ದಿಗಾರರೊಂದಿಗೆ ಮಾತನಾಡುತ್ತಾ, ದಿನೇ ದಿನೇ ಹೆಚ್ಚುತ್ತಿರುವ ಸೈಬರ್ ಅಪರಾಧಗಳು ಎಲ್ಲೆಡೆ ಯಾವುದೇ ಅಡೆತಡೆಗಳಿಲ್ಲದೇ ರಾಜ್ಯ, ದೇಶ, ವಿದೇಶದಾದ್ಯಂತ ನಡೆಯುತ್ತಿವೆ. ಈ ಹಿನ್ನೆಲೆಯಲ್ಲಿ ಆಧುನಿಕ ಅಪರಾಧ ತನಿಖೆಗಳಿಗೆ ತಕ್ಕಂತೆ ಸಿಬ್ಬಂದಿ ಹಾಗೂ ಅಧಿಕಾರಿಗಳಿಗೆ ತರಬೇತಿ ನೀಡಲಾಗುವುದು. ಯಾವುದೇ ಸೈಬರ್ ಅಪರಾಧವಾದರೆ ಹೊಸ ಕಾನೂನುಗಳನ್ವಯ ತನಿಖೆ ನಡೆಸಬೇಕಾಗುತ್ತದೆ ಎಂದರು.

ಜಿಲ್ಲೆಗೊಂದರಂತೆ ರಾಜ್ಯದಲ್ಲಿ ಒಟ್ಟು 43 ಸೆನ್ ಪೊಲೀಸ್ ಠಾಣೆಗಳಿದ್ದು, ಸದ್ಯ ಡಿವೈಎಸ್ಪಿ ಅಧಿಕಾರಿಗಳು ಇರುತ್ತಾರೆ. ಮುಂದಿನ ದಿನಗಳಲ್ಲಿ ಎಸ್.ಪಿ ರ್‍ಯಾಂಕ್ ಅಧಿಕಾರಿಗಳನ್ನು ನೇಮಿಸಲಾಗುವುದು. ಸೆನ್ ಠಾಣೆಯ ಸಿಬ್ಬಂದಿಗಳಿಗೆ ಹಾಗೂ ಅಧಿಕಾರಿಗಳಿಗೆ ವಿಶೇಷ ತರಬೇತಿ ರೂಪಿಸಲಾಗುವುದು. ಈ ಹಿನ್ನೆಲೆಯಲ್ಲಿ ವಿಧಿ ವಿಜ್ಞಾನ ಸಂಸ್ಥೆಯು ರಾಜ್ಯದ ಪೊಲೀಸ್ ಇಲಾಖೆಗೆ ಹೆಚ್ಚು ಉಪಯೋಗವಾಗಲಿದೆ ಎಂದರು.

ದಿನೇ ದಿನೇ ಅಪರಾಧಗಳ ರೂಪರೇಷೆ ಬದಲಾಗುತ್ತಿದೆ. ತನಿಖೆಯ ಮಾರ್ಗಗಳು ಸಹ ಬದಲಾಗುತ್ತಿವೆ. ಆಧುನಿಕ ತಂತ್ರಜ್ಞಾನದ ಹಿನ್ನೆಲೆಯಲ್ಲಿ ಗುಪ್ತಚರ ವಿಭಾಗದಲ್ಲಿ ಪ್ರತ್ಯೇಕ ತರಬೇತಿ ನೀಡಿದಂತೆ ಸೆನ್ ಠಾಣೆ ಸಿಬ್ಬಂದಿಗಳಿಗೆ ಪ್ರತ್ಯೇಕ ತರಬೇತಿ ನೀಡಲಾಗುವುದೆಂದು ಸಚಿವರು ತಿಳಿಸಿದರು.

ಸೈಬರ್ ಕ್ರೈಂಗಳು ಯಾವುದೇ ಅಡೆತಡೆ ಇಲ್ಲದೇ ವಿಶ್ವವ್ಯಾಪಿಯಾಗಿವೆ. ಗುಜರಾತ್‌ನಲ್ಲಿ ಸೈಬರ್ ವಿಶ್ವ ವಿದ್ಯಾಲಯ ನಿರ್ಮಿಸಲಾಗಿದ್ದು, ವಿವಿಧ ದೇಶಗಳಿಂದ ಆಸಕ್ತರು ಬಂದು ತರಬೇತಿ ಪಡೆಯುತ್ತಿದ್ದಾರೆ. ಇದರ ಭಾಗವಾಗಿ ಧಾರವಾಡದಲ್ಲಿ ವಿಧಿ ವಿಜ್ಞಾನ ಸಂಸ್ಥೆ ಸ್ಥಾಪಿಸಲಾಗಿದ್ದು, ರಾಜ್ಯದ ಪೊಲೀಸ್ ಇಲಾಖೆಗೆ ಆಧುನಿಕ ವಿಧಿ ವಿಜ್ಞಾನವು ಅತೀ ಹೆಚ್ಚು ಮಹತ್ವ ಪಡೆದುಕೊಳ್ಳಲಿದೆ ಎಂದರು.

ಬೆಂಗಳೂರಿನಲ್ಲಿ 10 ಸಾವಿರ ವಿದೇಶಿಗರು ವಾಸಿಸುತ್ತಿದ್ದು, ಆಫ್ರಿಕಾ ಪ್ರಜೆಗಳ ಮೇಲೆ ಹೆಚ್ಚು ನಿಗಾ ಇಡಲಾಗಿದೆ. ಕಳೆದೊಂದು ವರ್ಷದಲ್ಲಿ ಡ್ರಗ್ಸ್ ಧಂದೆಯಲ್ಲಿ ತೊಡಗಿದ ನೂರಾರು ವಿದ್ಯಾರ್ಥಿಗಳನ್ನು ಅವರವರ ದೇಶಕ್ಕೆ ವಾಪಸ್ ಕಳಿಸಲಾಗಿದೆ ಎಂದು ತಿಳಿಸಿದರು.

ನಂತರ ವಿಧಿ ವಿಜ್ಞಾನ ಸಂಸ್ಥೆಯ ವಿದ್ಯಾರ್ಥಿಗಳನ್ನು ಉದ್ದೇಶಿಸಿ ಮಾತನಾಡಿದ ಸಚಿವರು, ಈ ವಿದ್ಯಾರ್ಥಿಗಳಿಗೆ ಬರುವ ದಿನಮಾನಗಳಲ್ಲಿ ವಿಫುಲ ಅವಕಾಶಗಳಿವೆ. ಸೈಬರ್ ಫಾರೆನ್ಸಿಕ್‌ಗಳು, ಸೈಬರ್ ಕಮಾಂಡೋಗಳು, ಸೈಬರ್ ಎಕ್ಸ್‌ಪರ್ಟ್‌ಗಳ ತಯಾರಿ ಮಾಡುವಲ್ಲಿ ವಿಧಿ ವಿಜ್ಞಾನ ಸಂಸ್ಥೆಯು ಬಹು ಮುಖ್ಯ ಪಾತ್ರ ವಹಿಸುತ್ತದೆ ಎಂದು ತಿಳಿಸಿದರು.

ತಂತ್ರಜ್ಞಾನಕ್ಕನುಗುಣವಾಗಿ ಅಪರಾಧ ಹಾಗೂ ಅಪರಾಧಿಗಳ ಚಟುವಟಿಕೆಗಳನ್ನು ಮೊದಲೇ ವಿಶ್ಲೇಷಿಸಲು ಸರಿಯಾದ ಉಪಕರಣಗಳ ಜೊತೆಗೆ ಪರಿಣಿತರು ಸಹ ಇರಲೇಬೇಕು. ಭಾರತೀಯ 3 ಹೊಸ ಕಾನೂನುಗಳ ಬೇಡಿಕೆಗೆ ಅನುಗುಣವಾಗಿ ಪ್ರಕರಣಗಳನ್ನು ತನಿಖೆ ಮಾಡುವಲ್ಲಿ ಅನುಕೂಲವಾಗುತ್ತದೆ. ಸೈಬರ್ ಪರಿಣಿತರು ನೀಡುವ ವರದಿ ಹಾಗೂ ದಾಖಲೆಗಳು ಹೊಸ ಕಾನೂನಿನಲ್ಲಿ ಪ್ರಮುಖ ಪಾತ್ರ ವಹಿಸುತ್ತಿವೆ ಎಂದರು.



ರಾಜ್ಯ ಸರಕಾರವು ಡ್ರಗ್ಸ್ ವಿರುದ್ಧ ಸಮರ ಸಾರಿದ್ದು, ಸ್ವತಃ ಮುಖ್ಯಮಂತ್ರಿಗಳು ವಿಧಾನಸೌಧದಲ್ಲಿ ಈ ಬಗ್ಗೆ ವಿಶೇಷ ಕಾರ್ಯಪಡೆ ರಚಿಸಿದ್ದಾರೆ. ಕಳೆದೊಂದು ವರ್ಷದಲ್ಲಿ 150 ಕೋಟಿ ರೂ ಮೌಲ್ಯದ ಡ್ರಗ್ಸ್ ಬರುತ್ತಿದ್ದು, ಸಾಕಷ್ಟು ಎಚ್ಚರದ ಕ್ರಮಗಳನ್ನು ವಹಿಸಲಾಗುತ್ತಿದೆ. ಈಗಾಗಲೇ ಹೈಡ್ರೊ ಗಾಂಜಾವನ್ನು ನಾಲ್ಕು ಗೋಡೆಗಳ ನಡುವೆ ಬೆಳೆಯಲಾಗುತ್ತಿದ್ದು, ಇದನ್ನು ಕಂಡು ಹಿಡಿಯುವುದು ಸವಾಲಾಗಿದೆಯೆಂದರು.

ಸಂಸ್ಥೆಯ ನಿರ್ದೇಶಕ ಡಾ. ಮಂಜುನಾಥ ಘಾಟೆ, ಡಿಜಿಟಲ್ ವಿಧಿ ವಿಜ್ಞಾನ, ಔಷಧಿ ವಿಧಿ ವಿಜ್ಞಾನ, ಬಯೋಕೆಮಿಸ್ಟ್ರಿ ವಿಧಿ ವಿಜ್ಞಾನ, ಸೈಬರ್ ಸೆಕ್ಯೂರಿಟಿ ಹಾಗೂ ಪರಿಸರ ವಿಧಿ ವಿಜ್ಞಾನಗಳನ್ನು ಈ ಸಂಸ್ಥೆಯಲ್ಲಿ ವಿದ್ಯಾರ್ಥಿಗಳಿಗೆ ಕಲಿಸಲಾಗುತ್ತದೆ ಎಂದು ತಿಳಿಸಿದರು.

ಪ್ರಯೋಗಾಲಯ ಹಾಗೂ ಪ್ರಾತ್ಯಕ್ಷಿಕೆಗಳನ್ನು ಸಚಿವರು ವೀಕ್ಷಿಸಿದರು. ಶಾಸಕರಾದ ಪ್ರಸಾದ ಅಬ್ಬಯ್ಯ, ಎನ್.ಎಚ್. ಕೋನರಡ್ಡಿ, ಬೆಳಗಾವಿ ವಿಭಾಗದ ಐಜಿಪಿ ವಿಕಾಸಕುಮಾರ, ಪೊಲೀಸ್ ಆಯುಕ್ತ ಎನ್. ಶಶಿಕುಮಾರ ಉಪಸ್ಥಿತರಿದ್ದರು.

### ಗ್ಯಾರಂಟಿ ಯೋಜನೆಗಳ ಪ್ರಗತಿ ಪರಿಶೀಲನಾ ಸಭೆಯಲ್ಲಿ ಪ್ರಾಧಿಕಾರ ಅಧ್ಯಕ್ಷ ಎಸ್.ಆರ್. ಪಾಟೀಲ

# ಸಾರ್ವಜನಿಕರಿಗೆ ತೊಂದರೆಯಾಗದಂತೆ ಗಮನ ವಹಿಸಿ



■ವಿಜಯಸಾಕ್ಷಿ ಸುದ್ದಿ, ಧಾರವಾಡ

ಗ್ಯಾರಂಟಿ ಯೋಜನೆಗಳನ್ನು ಫಲಾನುಭವಿಗಳಿಗೆ ತಲುಪಿಸುವ ಕಡೆ ಅಧಿಕಾರಿಗಳು ಹೆಚ್ಚಿನ ಗಮನಹರಿಸಬೇಕು ಎಂದು ಜಿಲ್ಲಾ ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಎಸ್.ಆರ್. ಪಾಟೀಲ ಅವರು ಹೇಳಿದರು.

ಜಿಲ್ಲಾ ಪಂಚಾಯತ ಸಭಾಂಗಣದಲ್ಲಿ ಆಯೋಜಿಸಲಾಗಿದ್ದ ಸರ್ಕಾರದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಮತ್ತು ಸಾಂಸ್ಥಿಕ ಕಾರ್ಯ ವಿಧಾನಗಳು ಹಾಗೂ ಪರಿಣಾಮಕಾರಿಯಾಗಿ ಜಾರಿಗೊಳಿಸುವ ಬಗ್ಗೆ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಅಳ್ನಾವರ ಮತ್ತು ಕುಂದಗೋಳ ತಾಲೂಕಿನ ಕೆಲವು ಭಾಗಗಳಲ್ಲಿ ಸಾರಿಗೆ ಬಸ್‌ಗಳ ಹೆಚ್ಚಿನ ಬೇಡಿಕೆ ಇದೆ. ಶಾಲಾ-ಕಾಲೇಜು ವಿದ್ಯಾರ್ಥಿಗಳಿಗೆ ಹಾಗೂ ಸಾರ್ವಜನಿಕರಿಗೆ ತೊಂದರೆ-ಯಾಗದಂತೆ ಗಮನಹರಿಸಬೇಕು. ಸಮಯಕ್ಕೆ ಸರಿಯಾಗಿ ಬಸ್ ವ್ಯವಸ್ಥೆ ಕಲ್ಪಿಸಬೇಕು ಎಂದು ಸಾರಿಗೆ ಅಧಿಕಾರಿಗಳಿಗೆ ಅವರು ಸೂಚಿಸಿದರು.

ಹಳ್ಳಿಗಳಲ್ಲಿ ಗೃಹಲಕ್ಷ್ಮೀ ಯೋಜನೆಯಡಿ ಹಣ ಸರಿಯಾಗಿ ಫಲಾನುಭವಿಗಳಿಗೆ ತಲುಪುತ್ತಿಲ್ಲ ಎಂದು ಬಹಳಷ್ಟು ದೂರುಗಳು ದಾಖಲಾಗುತ್ತಿವೆ. ಫಲಾನುಭವಿಗಳಿಗೆ ಆಗುತ್ತಿರುವ ಸಮಸ್ಯೆಗಳನ್ನು ತ್ವರಿತವಾಗಿ ನಿವಾರಿಸಬೇಕು. ಗೃಹಲಕ್ಷ್ಮೀ ಯೋಜನೆಯ ಬಗ್ಗೆ ಸುಳ್ಳು ಸುದ್ದಿಗಳು ಕೇಳಿ ಬರುತ್ತಿದ್ದು, ಅದರ ಬಗ್ಗೆ ಜನರಿಗೆ ಸರಿಯಾದ ಮಾಹಿತಿಯನ್ನು ಅಧಿಕಾರಿಗಳು ನೀಡಬೇಕು ಎಂದು ಹೇಳಿದರು.

ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಸ್ವರೂಪ ಟಿ.ಕೆ ಮಾತನಾಡಿ, ಶಾಲಾ, ಕಾಲೇಜು, ಆಸ್ಪತ್ರೆಗಳು ಇರುವ ಸ್ಥಳಗಳಲ್ಲಿ ಕಡ್ಡಾಯವಾಗಿ ಬಸ್ ನಿಲುಗಡೆಗೆ ವ್ಯವಸ್ಥೆಯಾಗಬೇಕು. ಗ್ಯಾರಂಟಿ ಯೋಜನೆಗಳನ್ನು ಫಲಾನುಭಾವಿಗಳಿಗೆ ಉತ್ತಮವಾಗಿ ತಲುಪಿಸುವ ಕಾರ್ಯವನ್ನು ಸಂಬಂಧಿಸಿದ ಅಧಿಕಾರಿಗಳು ಮಾಡಬೇಕೆಂದು ತಿಳಿಸಿದರು.

ಯುವನಿಧಿ ಯೋಜನೆಯ ಪ್ರಚಾರಕ್ಕೆ ಎಲ್ಲಾ ಕಾಲೇಜು, ವಿಶ್ವವಿದ್ಯಾಲಯಗಳಲ್ಲಿ ಸಹಾಯ ಕೇಂದ್ರಗಳನ್ನು ತೆರೆಯಬೇಕು. ಹಿಂದಿನ ಸಭೆಯಲ್ಲಿ ನ್ಯಾಯ ಬೆಲೆ ಅಂಗಡಿಯ ಮುಂದೆ ಬೋರ್ಡ್ ಅಳವಡಿಸಲು ಸೂಚಿಸಲಾಗಿದ್ದು, ಇಲ್ಲಿಯವರೆಗೆ ಯಾವುದೇ ನ್ಯಾಯ ಬೆಲೆ ಅಂಗಡಿಗಳು ಬೋರ್ಡ್ ಅಳವಡಿಸದಿರುವುದು ಗಮನಕ್ಕೆ ಬಂದಿದೆ. ಇದರ ಬಗ್ಗೆ ಇಲಾಖೆಯ ಅಧಿಕಾರಿಗಳು ಗಮನಿಸಬೇಕು ಎಂದು ಅವರು ತಿಳಿಸಿದರು.

ಆಹಾರ ಇಲಾಖೆಯ ಜಂಟಿ ನಿರ್ದೇಶಕ ಚನ್ನಬಸಪ್ಪ ಕೊಡ್ಲಿ ಮಾತನಾಡಿ, ಜಿಲ್ಲೆಯಲ್ಲಿ ಅನ್ನಭಾಗ್ಯ ಯೋಜನೆಯಡಿ ಬಿಪಿಎಲ್ ಪಡಿತರರಿಗೆ ಇಲ್ಲಿಯವರೆಗೆ ಒಟ್ಟು 3,50,684 ಜನ ಫಲಾನುಭವಿಗಳಿಗೆ ರೂ. 256.017 ಕೋಟಿ ನೇರ ನಗದು ವರ್ಗಾವಣೆ ಮೂಲಕ ಹಣ ಸಂದಾಯ ಮಾಡಲಾಗಿದೆ. ಈ ಮೂಲಕ ಶೇ. 97.95ರಷ್ಟು ಪ್ರಗತಿ ಸಾಧಿಸಿದೆ ಮತ್ತು ಬಾಕಿ ಇರುವ 6,470 ಜನ ಫಲಾನುಭವಿಗಳ ಹಣ ಜಮಾ ಮಾಡಲು ಕ್ರಮ ವಹಿಸಲಾಗಿದೆ ಎಂದು ಹೇಳಿದರು.

ಜಿಲ್ಲಾ ಕೌಶಲ್ಯ ಅಭಿವೃದ್ಧಿ ಅಧಿಕಾರಿ ರವೀಂದ್ರ ದ್ಯಾಬೇರಿ ಮಾತನಾಡಿ, ಯುವನಿಧಿ ಯೋಜನೆಯಡಿ ಜಿಲ್ಲೆಯಲ್ಲಿ ಒಟ್ಟು 4,821 ಜನ ನೋಂದಣಿಯಾಗಿದ್ದು, 1,725 ಪುರುಷ ಹಾಗೂ 2,071 ಮಹಿಳೆಯರು ಸೇರಿ ಒಟ್ಟು 3,796 ಜನ ಫಲಾನುಭವಿಗಳಿಗೆ ಸಹಾಯಧನ ಸರಕಾರದಿಂದ ಜಮೆ ಆಗುತ್ತಿದೆ. 1,025 ಜನ ಫಲಾನುಭವಿಗಳ ಅರ್ಜಿ ಬಾಕಿಯಿದ್ದು, ಪರಿಶೀಲನಾ ಹಂತದಲ್ಲಿವೆ ಎಂದು ತಿಳಿಸಿದರು.

ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಉಪಾಧ್ಯಕ್ಷರುಗಳಾದ ಮುರಗಯ್ಯಾ ವಿರಕ್ತಮಠ, ಅರವಿಂದ ಏಗನಗೌಡರ, ಅಬ್ದುಲ್ ರಶೀದ ಬೋಳಾಬಾಯಿ ಹಾಗೂ ರತ್ನಾ ತೇಗೂರಮಠ ಸಭೆಯಲ್ಲಿ ಮಾತನಾಡಿದರು. ಜಿಲ್ಲಾ ಮಟ್ಟದ ಅಧಿಕಾರಿಗಳು ಹಾಗೂ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಸದಸ್ಯರು ಉಪಸ್ಥಿತರಿದ್ದರು.

# ಪ್ರಬಂಧ ಸ್ಪರ್ಧೆಯಲ್ಲಿ ವಿಜಯಕುಮಾರ್ ಪ್ರಥಮ ಜಿಲ್ಲಾಧಿಕಾರಿಗಳಿಂದ ಸನ್ಮಾನ



■ವಿಜಯಸಾಕ್ಷಿ ಸುದ್ದಿ, ಗದಗ

ರಾಷ್ಟ್ರಪಿತ ಮಹಾತ್ಮ ಗಾಂಧೀಜಿಯವರ 155ನೇ ಜಯಂತಿ ಅಂಗವಾಗಿ ವಾರ್ತಾ ಇಲಾಖೆಯಿಂದ ಆಯೋಜಿಸಲಾಗಿದ್ದ ರಾಜ್ಯ ಮಟ್ಟದ ಬಾಪೂಜಿ ಪ್ರಬಂಧ ಸ್ಪರ್ಧೆಯಲ್ಲಿ ಪದವಿಪೂರ್ವ ಕಾಲೇಜು ವಿಭಾಗದಿಂದ ಗದಗ ಸಿದ್ಧಲಿಂಗೇಶ್ವರ ನಗರದ ಸರ್ಕಾರಿ ಪದವಿಪೂರ್ವ ಕಾಲೇಜಿನ ಪ್ರಥಮ ಪಿಯುಸಿ ವಿದ್ಯಾರ್ಥಿ ವಿಜಯಕುಮಾರ್ ಬ. ದೊಡ್ಡಮನಿ ಪ್ರಥಮ ಸ್ಥಾನ ಪಡೆದುಕೊಂಡಿದ್ದಾರೆ.

ಜಿಲ್ಲಾಡಳಿತ ಭವನದಲ್ಲಿ ಶನಿವಾರ ಜಿಲ್ಲಾಧಿಕಾರಿ ಗೋವಿಂದರೆಡ್ಡಿ ಅವರು ಪ್ರಬಂಧ ಸ್ಪರ್ಧೆಯಲ್ಲಿ ರಾಜ್ಯ ಮಟ್ಟದಲ್ಲಿ ಪ್ರಥಮ ಸ್ಥಾನ ಪಡೆದು ಜಿಲ್ಲೆಗೆ ಕೀರ್ತಿ ತಂದಿದಕ್ಕೆ ಸಂತಸ ವ್ಯಕ್ತಪಡಿಸಿ ವಿಜಯಕುಮಾರ್ ದೊಡ್ಡಮನಿ ಅವರನ್ನು ಸನ್ಮಾನಿಸಿದರು. ಈ ಸಂದರ್ಭದಲ್ಲಿ ವಾರ್ತಾಧಿಕಾರಿ ವಸಂತ ಬಿ.ಮಡ್ಲೂರ, ಸರಕಾರಿ ಪದವಿಪೂರ್ವ ಕಾಲೇಜಿನ ಉಪನ್ಯಾಸಕ ಶ್ರೀಶೈಲ್ ಬೀರಕಬ್ಬಿ ಹಾಜರಿದ್ದರು. ಸರ್ಕಾರಿ ಪದವಿಪೂರ್ವ ಕಾಲೇಜಿನ ಪ್ರಾಂಶುಪಾಲರಾದ ಪೂರ್ಣಿಮಾ ಹೊಸಮನಿ, ಕಾಲೇಜಿನ ಬೋಧಕ ಸಿಬ್ಬಂದಿ, ಕುಟುಂಬ ಸದಸ್ಯರು ಹಾಗೂ ವಿದ್ಯಾರ್ಥಿಗಳು ವಿಜಯಕುಮಾರ್ ಅವರನ್ನು ಅಭಿನಂದಿಸಿದ್ದಾರೆ. ಇದಕ್ಕೂ ಪೂರ್ವದಲ್ಲಿ ಅಕ್ಟೋಬರ್ 2ರಂದು ಬೆಂಗಳೂರಿನ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ಕೇಂದ್ರ ಕಚೇರಿಯ ಸುಲೋಚನಾ ಸಭಾಂಗಣದಲ್ಲಿ ಮಹಾತ್ಮ ಗಾಂಧಿ ಸೇವಾ ಪ್ರಶಸ್ತಿ ಪ್ರದಾನ ಸಮಾರಂಭದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ವಿಜೇತರಿಗೆ ಪ್ರಶಸ್ತಿ ಪ್ರದಾನ ನೀಡಿ ಗೌರವಿಸಿದ್ದರು.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka